ವಿಶ್ವವಾಣಿ

ವಿಶ್ವಾಸವೇ ವಿಶ್ವ

ಟೀಂ ಇಂಡಿಯಾ ಬಳಗದಲ್ಲಿ ವರುಣ್

ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಗೆ ಟೀಂ ಇಂಡಿಯಾಕ್ಕೆ ಸ್ಪಿನ್ನರ್ ವರುಣ್ ಚಕ್ರವರ್ತಿ ಆಯ್ಕೆ

ರಾಷ್ಟ್ರಪತಿಗಳ ವಂದನಾ ನಿರ್ಣಯದ ಮೇಲಿನ ಚರ್ಚೆ ವೇಳೆ ಮಾತನಾಡಿದ ಪಿಎಂ ಸುದೀರ್ಘ ಭಾಷಣದುದ್ದಕ್ಕೂ ಪ್ರತಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ಪ್ರಧಾನಿ

ವಿಕಸಿತ ಭಾರತದ ಪರಿಕಲ್ಪನೆಗೆ ವಿಪಕ್ಷ ಅಡ್ಡಿ: ಮೋದಿ ವಾಗ್ದಾಳಿ

ದೆಹಲಿ: ಭಾರತದ ಅಭಿವೃದ್ಧಿಯ ನಾಗಾಲೋಟವನ್ನು ತಡೆಯುವ ಕೀಳು ರಾಜಕಾರಣ, ವಿಕಸಿತ ಭಾರತದ ಪರಿಕಲ್ಪನೆಗೆ ವಿರುದ್ಧವಾದುದು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಪ್ರತಿಪಕ್ಷಗಳು ತಮ್ಮ ರಾಜಕೀಯ ಲಾಭಕ್ಕಾಗಿ ರಾಷ್ಟ್ರೀಯ ಹಿತಾಸಕ್ತಿಯನ್ನೂ ಬಲಿಕೊಡಲು ಸಿದ್ಧವಿರುವುದು ವಿಷಾದನೀಯ ಎಂದು ಗುಡುಗಿದರು. ಈ ಮೂಲಕ ಭಾರತದ ಭೂಪ್ರದೇಶದ ಮೇಲೆ ಚೀನಾ ಅತಿಕ್ರಮಣದ ಆರೋಪ ಮಾಡಿದ್ದ ರಾಹುಲ್ ಗಾಂಧಿ ಅವರನ್ನು ಪ್ರಧಾನಿ ಮೋದಿ ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡರು.

ರಾಷ್ಟ್ರಪತಿ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಪಾಲ್ಗೊಳ್ಳಲು ದೇಶದ ಜನತೆ ನನಗೆ 14ನೇ ಬಾರಿ ಅವಕಾಶ ಮಾಡಿಕೊಟ್ಟಿದ್ದಾರೆ. ಇದಕ್ಕಾಗಿ ನಾನು ದೇಶದ ಜನತೆಗೆ ಧನ್ಯವಾದ ಅರ್ಪಿಸುತ್ತೇನೆ ಎಂದು ಹೇಳಿದರು.

ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ಭಾರತವು ಭವಿಷ್ಯದ 25 ವರ್ಷಗಳಲ್ಲಿ ಸಾಗಬೇಕಾದ ದಾರಿಯನ್ನು ತೋರಿಸಿಕೊಟ್ಟಿದ್ದಾರೆ. ವಿಕಸಿತ ಭಾರತದ ಉದ್ದೇಶದೊಂದಿಗೆ ನಾವು ಹೆಜ್ಜೆ ಹಾಕಬೇಕು ಎಂದು ರಾಷ್ಟ್ರಪತಿಗಳು ತಮ್ಮ ಭಾಷಣದಲ್ಲಿ ನಮಗೆ ಮಾರ್ಗದರ್ಶನ ಮಾಡಿದ್ದಾರೆ. ದೇಶದ ಬಡ ಜನರಿಗೆ ಮನೆ ಕಟ್ಟಿಕೊಡುವ ನಮ್ಮ ಉದ್ದೇಶವನ್ನು ಹಲವರು ಅಣಕಿಸುತ್ತಿದ್ದಾರೆ. ಆದರೆ ಪಕ್ಕಾ ಮನೆ, ಶೌಚಾಲಯ, ವಿದ್ಯುತ್ ಹೊಂದುವ ಬಡಜನರ ಕನಸಿನ ಮಹತ್ವ ಅರಮನೆಯಂತಹ ಮನೆಗಳಲ್ಲಿ ವಾಸಿಸುವ ಜನರಿಗೆ ತಿಳಿಯುವುದಿಲ್ಲ ಎಂದು ಹೇಳಿದರು.

ಇಂದು ಕೆಲವರು ನಗರ ನಕ್ಸಲರ ಭಾಷೆಯನ್ನು ಬಹಿರಂಗವಾಗಿ ಮಾತನಾಡುತ್ತಿರುವುದು ದುರದೃಷ್ಟಕರ, ಭಾರತದ ರಾಜ್ಯ ವ್ಯವಸ್ಥೆಗೆ ಸವಾಲು ಹಾಕುವುದು ಮತ್ತು ಅದರ ವಿರುದ್ಧ ಹೋರಾಟವನ್ನು ಘೋಷಿಸುವುದು ದುರದೃಷ್ಟಕರವಾಗಿದೆ. ಈ ಭಾಷೆಯನ್ನು ಮಾತನಾಡುವವರಿಗೆ ಸಂವಿಧಾನ ಅಥವಾ ರಾಷ್ಟ್ರದ ಏಕತೆ ಅರ್ಥವಾಗುವುದಿಲ್ಲ ಎಂದು ಪ್ರಧಾನಿ ಮೋದಿ ಅವರು ಪರೋಕ್ಷವಾಗಿ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ಉಲ್ಲೇಖಿಸಿ ತರಾಟೆಗೆ ತೆಗೆದುಕೊಂಡರು.

ಒಟ್ಟಿನಲ್ಲಿ ಪ್ರಧಾನಿ ಮೋದಿ ಅವರು ಲೋಕಸಭೆಯಲ್ಲಿ ಮಾಡಿದ ತಮ್ಮ ಸುದೀರ್ಘ ಭಾಷಣದಲ್ಲಿ, ಹಲವು ಮಹತ್ವದ ಅಂಶಗಳನ್ನು ಪ್ರಸ್ತಾಪಿಸಿದ್ದು, ತಮ್ಮ ಸರಕಾರದ ಅಭಿವೃದ್ಧಿ ಯೋಜನೆಗಳ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು.

ಪ್ರಧಾನಿ ಭಾಷಣದ ಮುಖ್ಯಾಂಶಗಳು

- ನೇರ ಹಣ ವರ್ಗಾವಣೆ ಮೂಲಕ ನಾವು ರೈತರ ಬ್ಯಾಂಕ್ ಅಕೌಂಟ್‌ಗೆ 40 ಸಾವಿರ ಕೋಟಿ ರುಪಾಯಿ ವರ್ಗಾಯಿಸಿದ್ದೇವೆ. ದೇಶದ ರೈತರ ಹಿತಾಸಕ್ತಿಯನ್ನು ಕಾಪಾಡುವ ವಾಗ್ದಾನ ಮಾಡುತ್ತಿದ್ದ ಹಿಂದಿನ ಸರಕಾರಗಳಿಗೂ, ರೈತರ ಹಿತಾಸಕ್ತಿ ಕಾಪಾಡಲು ನಿರ್ಣಯ ಕೈಗೊಳ್ಳುವ ನಮ್ಮ ಸರಕಾರಕ್ಕೂ ಇರುವ ಮುಖ್ಯ ವ್ಯತ್ಯಾಸ ಎಲ್ಲರ ಕಣ್ಣ ಮುಂದಿದೆ.
- ದೇಶದ ಮಧ್ಯಮ ವರ್ಗ ಹೆಚ್ಚಿನ ಆದಾಯ ತೆರಿಗೆ ದರದಿಂದ ಹೈರಾಣಾಗಿತ್ತು. ಆದರೆ ನಮ್ಮ ಸರಕಾರವು ಕಳೆದ 10 ವರ್ಷಗಳಲ್ಲಿ ಮಂಡಿಸಲಾದ ಎಲ್ಲ ಬಜೆಟ್‌ಗಳಲ್ಲಿ ಆದಾಯ ತೆರಿಗೆ ವಿನಾಯಿತಿ ಮಿತಿಯನ್ನು ಏರಿಕೆ ಮಾಡಿ, ಮಧ್ಯಮ ವರ್ಗದ ಹೊರೆಯನ್ನು ಕಡಿಮೆ ಮಾಡಿದೆ. ಈ ಬಾರಿಯ ಕೇಂದ್ರ ಬಜೆಟ್ 2025ರಲ್ಲಿ ನಮ್ಮ ಸರಕಾರವು 12.75 ಲಕ್ಷ ರು.ವರೆಗೆ ಶೂನ್ಯ ಆದಾಯ ತೆರಿಗೆ ಘೋಷಣೆ ಮಾಡಿದೆ.
- ಇಂಡಿಯಾ ಎಐ ಮಿಷನ್ ಬಗ್ಗೆ ಇಡೀ ಜಗತ್ತು ಆಶಾವಾದಿಯಾಗಿದೆ. ಜಾಗತಿಕ ಎಐ ಕ್ಷೇತ್ರದಲ್ಲಿ ಭಾರತ ತನ್ನ ಅಸ್ತಿತ್ವವನ್ನು ದೃಢವಾಗಿ ದಾಖಲಿಸಿದೆ. ನಾವು ಭಾರತದ ಯುವ ಸಮುದಾಯದ ಉತ್ತಮ ಭವಿಷ್ಯಕ್ಕಾಗಿ ಕೆಲಸ ಮಾಡುತ್ತಿದ್ದು, ವಿಕಸಿತ ಭಾರತದ ನಮ್ಮ ಕನಸನ್ನು ಖಂಡಿತವಾಗಿಯೂ ನನಸು ಮಾಡುತ್ತೇವೆ.
- ಪ್ರತಿಪಕ್ಷ ನಾಯಕರು ಮಾತೆತ್ತಿದ್ದರೆ ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಸಂವಿಧಾನ ಅಪಾಯದಲ್ಲಿದೆ ಎಂದು ಸುಳ್ಳು ನಿರೂಪಣೆ ನೀಡುತ್ತಾರೆ. ಆದರೆ ನಮ್ಮ ಕೇಂದ್ರ ಸರಕಾರ ಸಂವಿಧಾನವನ್ನು ಜೀವಿಸುತ್ತದೆ. ಸಂವಿಧಾನದ ಆಶಯಗಳಿಗೆ ತಕ್ಕಂತೆ ನಾವು ಕೆಲಸ ಮಾಡುತ್ತೇವೆ. ಇದಕ್ಕೆ ನಾನು ಹಲವಾರು ಉದಾಹರಣೆ ಕೊಡಬಲ್ಲೆ.



ಬಡವರ ಮನೆ ಮುಂದೆ ಫೋಟೋ ಸೆಷನ್ ಮಾಡುವ ನಾಯಕರಿಗೆ, ಸದನದಲ್ಲಿ ನಡೆಯುವ ಬಡವರ ಬಗೆಗಿನ ಚರ್ಚೆ ಬೇಸರ ತರಿಸುತ್ತದೆ. ನಾವು ಸಮಸ್ಯೆಯ ಸಮಾಧಾನಕ್ಕಾಗಿ ನಿರಂತರವಾಗಿ ಪ್ರಯತ್ನ ಮಾಡುತ್ತೇವೆ. ಆದರೆ ಕೆಲವರು ಇದನ್ನು ಅಪಹಾಸ್ಯ ಮಾಡುತ್ತಾ ದೇಶದ ಜನರ ಭಾವನೆಗೆ ಧಕ್ಕೆ ತರುತ್ತಾರೆ.

– ನರೇಂದ್ರ ಮೋದಿ ಪ್ರಧಾನಿ

ದೆಹಲಿಯಲ್ಲೇ ಠಿಕಾಣಿ ಹೂಡಿದರೂ ಸಿಗದ ವರಿಷ್ಠರು ಇಂದು ಭೇಟಿ ಸಾಧ್ಯತೆ, ಹಲವು ಬೇಡಿಕೆಗಳ ಮಂಡನೆ

ಭಿನ್ನರ ಬಣದಿಂದ ದೆಹಲಿ ದಂಡಯಾತ್ರೆ

ಬೆಂಗಳೂರು: ಬಿಜೆಪಿ ಹಾಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬದಲಾವಣೆಗೆ ಪಟ್ಟು ಹಿಡಿದಿರುವ ಭಿನ್ನ ಬಣದ ನಾಯಕರು ದೆಹಲಿ ದಂಡಯಾತ್ರೆ ಕೈಗೊಂಡಿದ್ದು, ವರಿಷ್ಠರ ಭೇಟಿಗಾಗಿ ಕಾದು ಕುಳಿತಿದ್ದಾರೆ. ಆದರೆ ಈವರೆಗೂ ಯಾವುದೇ ವರಿಷ್ಠರ ಭೇಟಿ ನಡೆದಿಲ್ಲ ಎನ್ನಲಾಗಿದೆ.

ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಜೆ.ಪಿ.ನಡ್ಡಾ ಸೇರಿದಂತೆ ಪ್ರಮುಖರು ಸಂಸತ್ ಅಧಿವೇಶದಲ್ಲಿ ಭಾಗಿಯಾಗಿದ್ದು, ಬಿಡುವಿಲ್ಲದ ಕಾರ್ಯಕ್ರಮದಲ್ಲಿ ತೊಡಗಿದ್ದಾರೆ. ಅಲ್ಲದೆ ಇಂದು ನಡೆಯಲಿರುವ ದೆಹಲಿ ಚುನಾವಣೆಯತ್ತ ಗಮನ ಹರಿಸಿದ್ದಾರೆ. ವರಿಷ್ಠರ ಭೇಟಿಗೆ ಭಿನ್ನರು ಸಮಯ ಕೋರಿದ್ದರೂ ಪ್ರಮುಖರು ಸಿಗುವುದು ಅನುಮಾನ ಎನ್ನಲಾಗಿದೆ.

ಈ ಮಧ್ಯೆ ಸೋಮವಾರ ರಾತ್ರಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಭೇಟಿಯಾಗಿ ರಾಜ್ಯದ ವಸ್ತು ಸ್ಥಿತಿ ವಿವರಿಸಿದ್ದೇನೆ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಮಂಗಳವಾರ ಬೆಳಗ್ಗೆ ಸಂಸತ್ತಿನಲ್ಲಿ ನಾಗರಿಕ ವಿಮಾನಯಾನ ಸಚಿವ ಜ್ಯೋತಿರಾದಿತ್ಯ ಸಿಂಧ್ಯ ಅವರನ್ನು ಮಾಜಿ ಸಚಿವರಾದ ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಶ್ರೀಮಂತ ಪಾಟೀಲ್ ಸೇರಿದಂತೆ ಕೆಲವರು ಭೇಟಿಯಾಗಿದ್ದರು. ರಾಜ್ಯ ಚುನಾವಣಾ ಉಸ್ತುವಾರಿ ಶಿವರಾಜ್ ಸಿಂಗ್ ಚೌಹ್ವಾಣ್ ಅವರನ್ನು ಭೇಟಿ ಮಾಡಲು ಸಮಯಾವಕಾಶ ಕೇಳಿದ್ದರೂ ಇನ್ನೂ ಭೇಟಿ ನಡೆದಿಲ್ಲ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ್ತಿತರರು ತಡರಾತ್ರಿ ವೇಳೆಗೆ ದೆಹಲಿ ತಲುಪಿದ್ದು, ಇಂದು ವರಿಷ್ಠರನ್ನು ಭೇಟಿ ಮಾಡಲಿದ್ದು, 23 ಜಿಲ್ಲಾಧ್ಯಕ್ಷರ ಆಯ್ಕೆ ಘೋಷಣೆ ರದ್ದು ಮಾಡಬೇಕು, ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಬೇಕು, ವಿಜಯೇಂದ್ರ ಅವರನ್ನು ಕೆಳಗಿಳಿಸಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳನ್ನು ವರಿಷ್ಠರ ಮುಂದೆ ಇಡಲಿದ್ದಾರೆ.

ಭ್ರಷ್ಟ ಕಾಂಗ್ರೆಸ್ ಸರಕಾರ ಮತ್ತು ಸಿಎಂ ಸಿದ್ದರಾಮಯ್ಯ ವಿರುದ್ಧ ನಡೆದ ಹೋರಾಟದಲ್ಲಿ ನೇತೃತ್ವ ವಹಿಸಲಾಗಿದೆ. ಭಿನ್ನರ ಹೇಳಿಕೆಗಳಿಂದ ಕಾರ್ಯಕರ್ತರೆಲ್ಲ ನೊಂದಿದ್ದಾರೆ. ದೆಹಲಿ ವರಿಷ್ಠರ ಮುಂದೆ ಏನು ಹೇಳಬೇಕಾಗಿದೆಯೋ ಹೇಳಿಕೊಳ್ಳಲಿ. ವರಿಷ್ಠರೊಂದಿಗೆ ಸಂಪರ್ಕದಲ್ಲಿದ್ದೇನೆ.

– ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ

ರಾಮುಲುಗೆ ನಮ್ಮ ಬೆಂಬಲ

ಶ್ರೀರಾಮುಲು ರಾಜ್ಯಾಧ್ಯಕ್ಷರಾದರೆ ನಮ್ಮದೇನೂ ತಕರಾರಿಲ್ಲ, ಅವರೂ ನಮ್ಮವರೇ. ರಾಜ್ಯದ ಎಲ್ಲ ಸಂಸದರು ನಮ್ಮ ಜತೆಗಿದ್ದಾರೆ, ವಿಜಯೇಂದ್ರ ಸಹೋದರ ಒಬ್ಬರನ್ನು ಬಿಟ್ಟು. ಯತ್ನಾಳ್ ರಾಜ್ಯಾಧ್ಯಕ್ಷ ಆಗಬೇಕು ಅನ್ನುವವರೂ ಇದ್ದಾರೆ. ಏನಾಗುತ್ತದೋ ನೋಡೋಣ. ನಾನು ಯಡಿಯೂರಪ್ಪ ಸಮಕಾಲಿನವನು. ಒಂದು ವೇಳೆ ವಿಜಯೇಂದ್ರರನ್ನು ಮತ್ತೆ ರಾಜ್ಯಾಧ್ಯಕ್ಷ ಮಾಡಿದರೆ ನಮ್ಮ ನಿರ್ಣಯ ತಿಳಿಸುತ್ತೇವೆ. ನಮ್ಮ ಹೋರಾಟವಂತೂ ಮುಂದುವರಿಯುತ್ತದೆ ಎಂದು ಯತ್ನಾಳ್ ಹೇಳಿದ್ದಾರೆ ಎಂದರು.

ವಿಜಯೇಂದ್ರ ಬೇಡವೇ ಬೇಡ

ವಿಜಯೇಂದ್ರ ರಾಜ್ಯಾಧ್ಯಕ್ಷ ಸ್ಥಾನದಿಂದ ಇಳಿಯಬೇಕು. ಯಾರಾದರೂ ಮುಂದಿನ ರಾಜ್ಯಾಧ್ಯಕ್ಷರಾಗಲಿ, ನಮ್ಮ ಬೆಂಬಲ ಇದೆ ಎಂದು ಶಾಸಕ ಬಿ.ಪಿ.ಹರೀಶ್ ಹೇಳಿದ್ದಾರೆ. ಯಡಿಯೂರಪ್ಪ ಸಿಎಂ ಆಗಿದ್ದಾಗ ಅತಿ ಹೆಚ್ಚು ಭ್ರಷ್ಟಾಚಾರ ಆಗಿದ್ದು ವಿಜಯೇಂದ್ರನ ಮೂಲಕ. ಅಶೋಕ, ಬೊಮ್ಮಾಯಿ, ಸುನೀಲ್ ಕುಮಾರ್, ಯತ್ನಾಳ್, ಅರವಿಂದ ಲಿಂಬಾವಳಿ, ಕುಮಾರ್ ಬಂಗಾರಪ್ಪ, ನಿರಾಣಿ ಇವರಲ್ಲಿ ಯಾರು ಬೇಕಾದರೂ ರಾಜ್ಯಾಧ್ಯಕ್ಷರಾಗಲಿ. ಹೈಕಮಾಂಡ್ ನವರು ಸಮಯಕ್ಕೆ ಸರಿಯಾದ ಕ್ರಮ ತೆಗೆದುಕೊಳ್ಳುತ್ತಾರೆ ಎಂದರು.

ಸೊಂಪಾದ ಪುಟಗಳು

ನರವಿಜ್ಞಾನದ ಹೆಬ್ಬಾಗಿಲನ್ನು ತೆರೆದ ಹುತಾತ್ಮ ಲೆಬೋರ್ನ್ಯ — ಹಿಂದಿರುಗಿ ನೋಡಿದಾಗ, ಡಾ. ನಾ.ಸೋಮೇಶ್ವರ 6

ನಮ್ಮ ನದಿಗಳ ಪಾವಿತ್ರ್ಯವನ್ನು ಉಳಿಸುವವರಾರು? — ಲೋಕಮತ, ಲೋಕೇಶ್ ಕಾಯರ್ಗ 7

ದಾರಿದೀಪೋಕ್ತಿ

ಅದ್ಭುತ ಅಥವಾ ಉತ್ತಮ ಕೆಲಸ ಮಾಡುವ ಏಕೈಕ ಮಾರ್ಗವೆಂದರೆ, ನೀವು ಮಾಡುವ ಕೆಲಸವನ್ನು ಅತ್ಯಂತ ಗಾಢವಾಗಿ ಪ್ರೀತಿಸುವುದು ಮತ್ತು ಅದರಲ್ಲಿ ನೂರಕ್ಕೆ ನೂರು ತಲ್ಲೀನವಾಗುವುದು. ನಿಮ್ಮ ಕೆಲಸವನ್ನು ನೀವು ಪ್ರೀತಿಸದೇ, ಬೇರೆಯವರು ಪ್ರೀತಿಸುವುದಿಲ್ಲ. ನಿಮ್ಮ ಮೇಲೆ ನಿಮಗೆ ನಂಬಿಕೆ ಇರಲಿ.

ವಕ್ರತುಂಡೋಕ್ತಿ



'ಸಮಯ ಬಂದಾಗ ಎಲ್ಲವನ್ನೂ ಬಿಚ್ಚಿಡುತ್ತೇನೆ' ಅಂತ ಯಾರಾದರೂ ಹೇಳಿದರೆ ಅದು ಗಂಡಸು ರಾಜಕಾರಣ ಎಂದು ತಿಳಿಯಬಹುದು.

205 ಭಾರತೀಯರು ಅಮೆರಿಕದಿಂದ ವಾಪಸ್

ವಾಷಿಂಗ್ಟನ್: ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ್ದ 205 ಭಾರತೀಯರನ್ನು ಗಡಿಪಾರು ಪ್ರಕ್ರಿಯೆ ಮೊದಲ ಹಂತದಲ್ಲಿ ಆರಂಭವಾಗಿದೆ. ಎಲ್ಲರನ್ನೂ ಅಮೆರಿಕ ಮಿಲಿಟರಿ ವಿಮಾನದಲ್ಲಿ ಭಾರತಕ್ಕೆ ವಾಪಸ್ ಕರೆತರಲಾಗುತ್ತಿದ್ದು, ಅಮೆರಿಕದ ಟೆಕ್ಸಾಸ್‌ನಿಂದ ವಿಮಾನ ಹೊರಟಿದೆ. ಅಮೆರಿಕದಲ್ಲಿರುವ ಅಕ್ರಮ ಭಾರತೀಯ ವಲಸಿಗರನ್ನು ಮರಳಿ ಕರೆತರುವ ಇಂತಹ ಅನೇಕ ವಿಮಾನಗಳಿದ್ದು, ಇದು ಮೊದಲನೆಯದಾಗಿದೆ. ಅಮೆರಿಕದ ಸಿ-17 ಮಿಲಿಟರಿ ವಿಮಾನವು ಭಾರತೀಯ ಪ್ರಜೆಗಳನ್ನು ಮನೆಗೆ ಮರಳಿ ಕರೆತರುತ್ತಿದೆ. ಯುಎಸ್ ವಾಯುಪಡೆಯ ಸಿ-17 ವಿಮಾನವು 205 ಪ್ರಯಾಣಿಕರಿಗೆ ಒಂದೇ ಒಂದು ಶೌಚಾಲಯವನ್ನು ಹೊಂದಿದೆ. ಅಕ್ರಮ ವಲಸಿಗರ ವಿಚಾರದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಠಿಣ ನಿಲುವು ಕೈಗೊಂಡಿದ್ದಾರೆ. ಅದಕ್ಕೆ ಅನುಗುಣವಾಗಿ ವಲಸಿಗರನ್ನು ಗಡಿಪಾರು ಮಾಡಲಾಗುತ್ತಿದೆ.

ಮಾತಂದ್ರೆ ಮಾತು

ಕುಮಾರಸ್ವಾಮಿ ಅವರು ಮೊದಲು ತಮ್ಮ ಕರ್ತವ್ಯ ಮಾಡಲಿ. ಅದು ಬಿಟ್ಟು, ಅವರು ಕೇಳಲಿಲ್ಲ, ಇವರು ಕೇಳಲಿಲ್ಲ ಅಂತ ಕಥೆ ಹೇಳಬಾರದು. ಹಾಗಿದ್ದರೆ, ಕೇಂದ್ರ ಸರಕಾರದಲ್ಲಿ ಇವರದ್ದು ಏನೂ ನಡೆಯುವುದಿಲ್ಲವೇ? ಪ್ರಧಾನಿ ಮೋದಿ ಮುಂದೆ ಇವರ ಬೇಳೆಕಾಳು ಬೇಯುವುದಿಲ್ಲವೇ?

– ಎಚ್.ಸಿ.ಬಾಲಕೃಷ್ಣ ಶಾಸಕ

ಫನ್‌ತರಂಗ

– ರಘುಪತಿ ಶೃಂಗೇರಿ –

70–90 ಅಲ್ಲ, ವಾರಕ್ಕೆ 120 ಗಂಟೆ ಕೆಲಸ ಮಾಡಿ – ಎಲಾನ್ ಮಸ್ಕ್



ನಾಳೆಯಿಂದ ಮುಖ್ಯಮಂತ್ರಿ ಸಿದ್ದು ಮ್ಯಾರಥಾನ್ ಸಭೆ

ಬೆಂಗಳೂರು: ಮಾರ್ಚ್ 2ನೇ ವಾರದಲ್ಲಿ ಮಂಡನೆಯಾಗಲಿರುವ ರಾಜ್ಯ ಬಜೆಟ್‌ಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರದಿಂದ ಮ್ಯಾರಥಾನ್ ಸಭೆಗಳನ್ನು ನಡೆಸಲು ಮುಂದಾಗಿದ್ದಾರೆ.

ಫೆ.3ರಿಂದಲೇ ಬಜೆಟ್ ಪೂರ್ವಭಾವಿ ಇಲಾಖಾವಾರು ಸಭೆ ನಡೆಯಬೇಕಿತ್ತು. ಆದರೆ ಮೊಣಕಾಲು ನೋವಿನ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದರಿಂದ ಇಲಾಖಾವಾರು ಸಭೆಗಳನ್ನು ಮುಂದೂಡಲಾಗಿತ್ತು. ಆದರೀಗ ಗುರುವಾರದಿಂದ ವಿವಿಧ ಇಲಾಖೆಗಳ ಪೂರ್ವಭಾವಿ ಸಭೆ ನಡೆಸಲು ತೀರ್ಮಾನಿಸಿದ್ದು, ನಿತ್ಯ ಆರರಿಂದ ಎಂಟು ಇಲಾಖೆಗಳ ಸಭೆ ನಡೆಸಲಿದ್ದಾರೆ ಎಂದು ತಿಳಿದುಬಂದಿದೆ.

ಪೂರ್ವಭಾವಿ ಸಭೆಗಳು ಕರ್ನಾಟಕ ವಿದ್ಯುತ್ ನಿಗಮದ ಸಭಾಂಗಣದಲ್ಲಿ ನಡೆಯಲಿದ್ದು, ಇಲಾಖಾವಾರು ಸಚಿವರು, ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ಕಾರ್ಯದರ್ಶಿಗಳೊಂದಿಗಿನ ಸಭೆಗೆ ಐವರು ಅಧಿಕಾರಿಗಳು ಮಾತ್ರ ಉಪಸ್ಥಿತರಿರಬೇಕು ಎಂದು ಸೂಚನೆ ನೀಡಲಾಗಿದೆ.

- ನಿತ್ಯ ಆರರಿಂದ ಎಂಟು ಇಲಾಖೆಗಳ ಸಭೆ ನಡೆಸಲಿರುವ ಮುಖ್ಯಮಂತ್ರಿ
- ಇಲಾಖಾವಾರು ಬೇಡಿಕೆ, ಅನುದಾನ ಹಂಚಿಕೆಗೆ ಸಂಬಂಧ ಚರ್ಚೆ

ಗುರುವಾರ, ಶುಕ್ರವಾರ, ಶನಿವಾರ ನಿರಂತರ ಸಭೆಗಳು ನಡೆಯಲಿದ್ದು, ಬಳಿಕ ಫೆ.10 ಹಾಗೂ ಫೆ.14ರಂದು ಇನ್ನುಳಿದ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಈಗಾಗಲೇ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಿದ್ದರಾಮಯ್ಯ ಅವರು, 2025-26ನೇ ಸಾಲಿನಲ್ಲಿ ಇಲಾಖಾವಾರು ಬೇಡಿಕೆ ಹಾಗೂ ಅನುದಾನ ಹಂಚಿಕೆಗೆ ಸಂಬಂಧಿಸಿದಂತೆ ಸಭೆ ನಡೆಸಲಿದ್ದಾರೆ. ಇದಾದ ಬಳಿಕ ಫೆಬ್ರವರಿ ಕೊನೇ ವಾರ, ಮಾರ್ಚ್ ಮೊದಲ ವಾರದಲ್ಲಿ ಅಂತಿಮ ಸುತ್ತಿನ ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಪ್ರೇಯಸಿಗೆ 3 ಕೋಟಿ ರು. ಮೌಲ್ಯದ ಮನೆ ಉಡುಗೊರೆ ಕೊಟ್ಟ ಹೈಟೆಕ್ ಕಳ್ಳ

ಚಿನ್ನಗಳ್ಳನ ಪ್ರೇಮಕಥೆ

ಬೆಂಗಳೂರು: ಕಳವು ಮಾಡಿದ ಚಿನ್ನಾಭರಣಗಳನ್ನು ಕರಗಿಸಿ ಗಟ್ಟಿ ಮಾಡಿ ಮಾರಾಟ ಮಾಡಿದ ಹಣದಿಂದ ಪ್ರೇಯಸಿಗೆ ಬರೋಬ್ಬರಿ 3 ಕೋಟಿ ರು. ಮೌಲ್ಯದ ಮನೆ ಕಟ್ಟಿಸಿಕೊಟ್ಟಿದ್ದ ಖತರ್ನಾಕ್ ಖದೀಮನೊಬ್ಬ ಮಡಿವಾಳ ಠಾಣೆಯ ಪೊಲೀಸರ ಬಲೆಗೆ ಬಿದ್ದಿದ್ದಾನೆ.

ಸೊಲ್ಲಾಪುರ ಮೂಲದ ಪಂಚಾಕ್ಷರಿ ಸ್ವಾಮಿ (37) ಬಂಧಿತ ಆರೋಪಿ. ಆತನಿಂದ 12.25 ಲಕ್ಷ ಮೌಲ್ಯದ 181 ಗ್ರಾಂ ಚಿನ್ನದ ಗಟ್ಟಿ, 333 ಗ್ರಾಂ ಬೆಳ್ಳಿಯ ವಸ್ತುಗಳು, ಚಿನ್ನದ ಗಟ್ಟಿ ಮಾಡಲು ಉಪಯೋಗಿಸುತ್ತಿದ್ದ ಒಂದು ಫೈರ್ ಗನ್, ಮೂಸ್ ಜಪ್ತಿ ಮಾಡಲಾಗಿದೆ.

ಕಳವು ಪ್ರಕರಣದಲ್ಲಿ ಭಾಗಿಯಾಗಿದ್ದ ಪಂಚಾಕ್ಷರಿ ಸ್ವಾಮಿಯ ಸಹಚರ ತಲೆಮರೆಸಿಕೊಂಡಿದ್ದು, ಪತ್ತೆ ಕಾರ್ಯ ಮುಂದುವರಿದಿದೆ. ಬಂಧಿತ ಆರೋಪಿಯು ಪ್ರಖ್ಯಾತ ನಟಿಯೊಬ್ಬಳ ಜತೆಗೂ ನಂಟು ಹೊಂದಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ತನ್ನ ಮನೆ ಹರಾಜಿಗೆ: ಪಂಚಾಕ್ಷರಿ ಸ್ವಾಮಿ ತಂದೆ ರೈಲ್ವೆ ಇಲಾಖೆಯ ಉದ್ಯೋಗಿಯಾಗಿದ್ದು, ಅವರ ಅಕಾಲಿಕ ಸಾವಿನ ಬಳಿಕ ತಾಯಿಗೆ ನೌಕರಿ ಸಿಕ್ಕಿತ್ತು. ಚಿಕ್ಕದಾಗಿರುವ ಆತನ ಮನೆಯು ತಾಯಿಯ ಹೆಸರಿನಲ್ಲಿದೆ. ಈ ಮನೆ ಮೇಲೆ ಸಾಲ ಇದ್ದು, ಸಾಲ ಕಟ್ಟದ ಹಿನ್ನೆಲೆಯಲ್ಲಿ ಬ್ಯಾಂಕ್‌ನಿಂದ ನೋಟಿಸ್ ಬಂದಿದೆ. ವಾಸದ ಮನೆ ಸದ್ಯ ಹರಾಜಿಗೆ ಬಂದಿದೆ.

ಮಹಾರಾಷ್ಟ್ರದಿಂದ ಬೆಂಗಳೂರಿಗೆ ಶಿಫ್ಟ್!

2024ರಲ್ಲಿ ಜೈಲಿನಿಂದ ಬಿಡುಗಡೆಯಾದ ಪಂಚಾಕ್ಷರಿ ಬೆಂಗಳೂರಿಗೆ ಬಂದು ಕಳ್ಳತನ ಆರಂಭಿಸಿದ್ದ. ಬೀಗ ಹಾಕಿದ ಮನೆಗಳನ್ನೇ ಟಾರ್ಗೆಟ್ ಮಾಡುತ್ತಿದ್ದ ಇವನು ಸದ್ದಿಲ್ಲದೇ ಕೆಲಸ ಮುಗಿಸಿ ಬಿಡುತ್ತಿದ್ದ. ಕಳೆದ ಜನವರಿ 9ರಂದು ಮಡಿವಾಳದಲ್ಲಿ ಮನೆ ಕಳ್ಳತನ ಮಾಡಿದ್ದ ಇವನು ಕಳ್ಳತನ ಮಾಡಿದ ಬಳಿಕ ರಸ್ತೆಯಲ್ಲೇ ಬಟ್ಟೆ ಬದಲಿದ್ದಾನೆ. ಇದೇ ಸುಳಿವಿನ ಮೇಲೆ ಮಡಿವಾಳ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಪಂಚಾಕ್ಷರಿ ಮೇಲೆ 180ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿರುವುದು ಬೆಳಕಿಗೆ ಬಂದಿದೆ.

22 ಲಕ್ಷದ ಅಕ್ವೇರಿಯಂ ಉಡುಗೊರೆ: ಪಂಚಾಕ್ಷರಿಗೆ ಮದುವೆಯಾಗಿದ್ದರೂ ಪ್ರೇಯಸಿಯ ಶೋಕಿ ಹೊಂದಿದ್ದ. ಮದುವೆಯಾಗಿ ಮಗು ಇದ್ದರೂ 2016ರಲ್ಲಿ ಪ್ರಿಯತಮೆಗೆ ಕೊಲ್ಕತ್ತಾದಲ್ಲಿ 3 ಕೋಟಿ ಮೌಲ್ಯದ ಮನೆ ಗಿಫ್ಟ್ ಕೊಟ್ಟಿದ್ದಾನೆ. ಇಷ್ಟೇ ಅಲ್ಲದೇ ಪ್ರಿಯತಮೆ ಹುಟ್ಟುಹಬ್ಬಕ್ಕೆ 22 ಲಕ್ಷದ ಅಕ್ವೇರಿಯಂ ಗಿಫ್ಟ್ ಕೊಟ್ಟಿದ್ದ ಎಂಬುದು ತನಿಖೆಯಲ್ಲಿ ತಿಳಿದುಬಂದಿದೆ.

ಪಿ.ಎನ್.ದೇಸಾಯಿ ಆಯೋಗದ ಅವಧಿ ಮೇ 31 ರವರೆಗೆ ವಿಸ್ತರಣೆ

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) 2006 ರಿಂದ 2024 ರ ಜುಲೈ 15 ರವರೆಗೂ ನಡೆದಿರುವ ಭೂಸ್ವಾಧೀನ, ಬಡಾವಣೆಗಳ ನಿರ್ಮಾಣ, ನಿವೇಶನ ಹಂಚಿಕೆ, ಪರಿಹಾರ ವಿತರಣೆ ಮತ್ತು ಬದಲಿ ನಿವೇಶನಗಳ ಹಂಚಿಕೆ ಆರೋಪಗಳ ಕುರಿತು ವಿಚಾರಣೆ ನಡೆಸಲು ರಾಜ್ಯ ಸರಕಾರ ನೇಮಿಸಿದ್ದ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ನೇತೃತ್ವದ ಏಕ ಸದಸ್ಯ ಆಯೋಗದ ಅವಧಿಯನ್ನು ಮೇ 31 ರವರೆಗೆ ವಿಸ್ತರಿಸಲಾಗಿದೆ.

ವಿಚಾರಣಾ ಆಯೋಗದ ಅವಧಿ ವಿಸ್ತರಿಸುವಂತೆ ಆಯೋಗದ ಕಾರ್ಯದರ್ಶಿ ಜ.6ರಂದು ಸರಕಾರಕ್ಕೆ ಮನವಿ ಸಲ್ಲಿಸಿದ್ದರು. ಎಚ್.ಡಿ.ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ, ಡಿ.ವಿ.ಸದಾನಂದಗೌಡ, ಜಗದೀಶ್ ಶೆಟ್ಟರ್, ಸಿದ್ದರಾಮಯ್ಯ ಮತ್ತು ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಪ್ರಾಧಿಕಾರದಲ್ಲಿ ನಡೆದಿರಬಹುದಾದ ಅವ್ಯವಹಾರಗಳ ಕುರಿತು ವಿಚಾರಣೆ ನಡೆಸಿ, ವರದಿ ಸಲ್ಲಿಸುವ ಜವಾಬ್ದಾರಿಯನ್ನು ಆಯೋಗಕ್ಕೆ ವಹಿಸಲಾಗಿದೆ.

1.55 ಕೋಟಿ ನರೇಗಾ ಸಕ್ರಿಯ ಕಾರ್ಮಿಕರ ಹೆಸರು ಡಿಲೀಟ್

ದೆಹಲಿ: 2022ರಿಂದ 2024ರ ಅವಧಿಯಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಿಂದ (ನರೇಗಾ) 1.55 ಕೋಟಿ ಸಕ್ರಿಯ ಕಾರ್ಮಿಕರ ಹೆಸರುಗಳನ್ನು ಅಳಿಸಿ ಹಾಕಲಾಗಿದೆ ಎಂದು ಸರಕಾರ ಸಂಸತ್ತಿನಲ್ಲಿ ಮಂಗಳವಾರ ಮಾಹಿತಿ ನೀಡಿದೆ. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಗ್ರಾಮೀಣ ಅಭಿವೃದ್ಧಿ ಖಾತೆ ರಾಜ್ಯ ಸಚಿವ ಕಮಲೇಶ್ ಪಾಸ್ವಾನ್ ಅವರು, ಉದ್ಯೋಗ ಕಾರ್ಡ್‌ಗಳ ದುರುಪಯೋಗ ತಡೆಗಾಗಿ ಮತ್ತು ನೈಜ ಫಲಾನುಭವಿಗಳನ್ನು ಯೋಜನೆಯಿಂದ ಹೊರಗಿಡುವುದನ್ನು ತಪ್ಪಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಫೆ.1ರವರೆಗೆ 13.41 ಕೋಟಿ ಸಕ್ರಿಯ ಕಾರ್ಮಿಕರ ಪೈಕಿ 13.34 ಕೋಟಿ (99.47%) ಕಾರ್ಮಿಕರ ಹೆಸರಿನ ಜತೆ ಆಧಾರ್ ಸಂಖ್ಯೆಯನ್ನು ಜೋಡಿಸಲಾಗಿದೆ ಎಂದು ತಿಳಿಸಿದರು.

ಕಾರಣಗಳು

- ಸುಳ್ಳು ಅಥವಾ ತಪ್ಪು ಮಾಹಿತಿ ಇರುವ ಉದ್ಯೋಗ ಕಾರ್ಡ್
- ಗ್ರಾಮ ಪಂಚಾಯಿತಿಯಿಂದ ಕುಟುಂಬಗಳ ಶಾಶ್ವತ ಸ್ಥಳಾಂತರ
- ಗ್ರಾಮಗಳನ್ನು 'ನಗರ' ಎಂದು ವರ್ಗೀಕರಿಸಿದ ಕಾರಣ

ಬಸವನಬಾಗೇವಾಡಿಯಲ್ಲಿ ಬೃಹತ್ ಸಭೆ | ಮಾಜಿ ಡಿಸಿಎಂ ಈಶ್ವರಪ್ಪ, 1008 ಸ್ವಾಮೀಜಿಗಳು ಭಾಗಿ

ಕ್ರಾಂತಿವೀರ ಬ್ರಿಗೇಡ್‌ಗೆ ವಿಧ್ಯುಕ್ತ ಚಾಲನೆ

ವಿಜಯಪುರ/ಬಸವನಬಾಗೇವಾಡಿ: ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ನೇತೃತ್ವದ ಕ್ರಾಂತಿವೀರ ಬ್ರಿಗೇಡ್‌ಗೆ ಬಸವನಬಾಗೇವಾಡಿಯಲ್ಲಿ ಮಂಗಳವಾರ ವಿಧ್ಯುಕ್ತ ಚಾಲನೆ ದೊರೆತಿದೆ. ಈಶ್ವರಪ್ಪ ದಂಪತಿ ಕನ್ನೇರಿಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಗಳ ಪಾದಪೂಜೆ ಮಾಡುವ ಮೂಲಕ 1008 ಪೂಜ್ಯರ ಪಾದಪೂಜೆಯೊಂದಿಗೆ ಬ್ರಿಗೇಡ್ ಉದ್ಘಾಟನೆ ನೆರವೇರಿದೆ. ಈ ವೇಳೆ ಈಶ್ವರಪ್ಪ ಪುತ್ರ ಕಾಂತೇಶ್ ಮತ್ತು ಕುಟುಂಬದವರು ಭಾಗಿಯಾಗಿದ್ದರು.

ಗೋರಕ್ಷಣೆಗೆ ಬ್ರಿಗೇಡ್ ಪಣ: ಬ್ರಿಗೇಡ್ ಸಂಚಾಲಕ, ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಉದ್ಘಾಟನಾ ಭಾಷಣ ಮಾಡಿ, ಜಾತಿ, ಪಕ್ಷ ಬಿಟ್ಟು ಧರ್ಮ ಉಳಿಸಲು ನಾವು ಪ್ರತಿಜ್ಞೆ ಮಾಡುತ್ತಿದ್ದೇವೆ. 1008 ಸ್ವಾಮೀಜಿಗಳೂ ಕುಳಿತಿದ್ದಾರೆ. ಅವರು ಸ್ವಾಮೀಜಿಗಳಲ್ಲ, ದೇವರು. ಬೇರೆಯವರಂತೆ ನಾವು ಜಾತಿ ಮಾಡಿದರೆ ಸಣ್ಣವರಾಗುತ್ತೇವೆ ಎಂದರು.

ಸದಾನಂದಗೌಡ ಸಿಎಂ ಇದ್ದಾಗ 109 ಕೋಟಿ, ಬಸವರಾಜ ಬೊಮ್ಮಾಯಿ ಸಿಎಂ ಇದ್ದಾಗ ಮಠಗಳಿಗೆ 129 ಕೋಟಿ ಅನುದಾನ ಕೊಟ್ಟಿದ್ದಾರೆ. ವರ್ಷಗಳಿಂದಿರುವ ನಮ್ಮ ಜಮೀನುಗಳನ್ನು ವಕ್ಫ್ ಆಸ್ತಿ ಮಾಡಿಕೊಂಡಿದ್ದರು. ವಕ್ಫ್ ಬೋರ್ಡ್ ಉಲ್ಲೇಖವನ್ನು ಪಹಣಿಯಿಂದ ತೆಗೆಯುವರೆಗೂ ನಮ್ಮ ಹೋರಾಟ. ಸಾಧು-ಸಂತರ ಮಾರ್ಗದರ್ಶನದಲ್ಲಿ ಕ್ರಾಂತಿವೀರ ಬ್ರಿಗೇಡ್ ಕಟ್ಟಿದ್ದೇವೆ. ರಾಜ್ಯ, ದೇಶದಲ್ಲಿ ಹಿಂದುತ್ವ ಉಳಿಸುತ್ತೇವೆ ಎಂದು ಈಶ್ವರಪ್ಪ ಘೋಷಿಸಿದರು.

ಹಿಂದೂಗಳ ಸಂಖ್ಯೆ ಕುಸಿತಕ್ಕೆ ಕಳವಳ: ಕನ್ನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಆಶೀರ್ವಚನ ನೀಡಿ, ಇತ್ತೀಚೆಗೆ ದೇಶ, ಧರ್ಮ, ಹೃದಯಕ್ಕೆ ಆಘಾತಗಳಾಗುತ್ತಿವೆ. ಇದನ್ನು ತಪ್ಪಿಸಲು ಒಂದು ಚಳವಳಿ ಉಂಟಾಗಿದೆ. ಸಾಂಸ್ಕೃತಿಕ ಚಳವಳಿ ಉಳಿಸಬೇಕಿದೆ. ಶೇ.80ರಷ್ಟು ಸಮಾಜಕ್ಕಾಗಿ ಕೆಲಸ, ಶೇ.20ರಷ್ಟು ರಾಜಕೀಯ ಮಾಡಿದರೆ ಉತ್ತಮ ರಾಜಕಾರಣ ಆಗಬಹುದು. ಜನಹಿತ ಕೆಲಸ ಮಾಡುವವರೇ ಜನನಾಯಕ ಎಂದರು.

ಪಾಕಿಸ್ತಾನ ವಿಭಜನೆಯಾದಾಗ 35 ಸಾವಿರ ಜನರು ಭಾರತಕ್ಕೆ ಬರುವ ವೇಳೆ ಗಡಿಯೊಳಗೆ ಬಂದವರು ಕೇವಲ 3 ಸಾವಿರ ಮಾತ್ರ. ಹಿಂದೂ ಮಹಿಳೆಯರು, ಯುವತಿಯರ ಮೇಲೆ ಅತ್ಯಾಚಾರ ಮಾಡಿದರು. ಇದನ್ನು ತಪ್ಪಿಸೋಕೆ ವಿಷ ಉಣ್ಣುವಂತಾಗಿತ್ತು. ಈಗ ಅಂತಹ ಪರಿಸ್ಥಿತಿ ಬರುವ ಸಾಧ್ಯತೆ ಇದೆ. ಇದನ್ನು ಈಶ್ವರಪ್ಪ ಕಂಡಿದ್ದಾರೆ, ಇದೆಲ್ಲ ಹಿಂದಿನಿಂದಲೂ ಬಂದಿದೆ. ತುಷ್ಟೀಕರಣ ಪರಿಣಾಮ ಗಂಭೀರವಾಗಲಿದೆ ಎಂದು ಸ್ವಾಮೀಜಿ ಎಚ್ಚರಿಕೆ ಕೊಟ್ಟರು.

→ 8

ಬಸವನಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್‌ಗೆ ಚಾಲನೆ ದೊರೆಯಿತು. ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಕನ್ನೇರಿ ಮಠದ ಸ್ವಾಮೀಜಿ ಸೇರಿ ಸಾವಿರಕ್ಕೂ ಹೆಚ್ಚು ಸಾಧು-ಸಂತರು, ಸಹಸ್ರಾರು ಜನರು ಪಾಲ್ಗೊಂಡಿದ್ದರು.

ಚಾಮರಾಜಪೇಟೆಯಲ್ಲಿ ಗೋವಿನ ಕೆಚ್ಚಲು ಕತ್ತರಿಸಿದ್ದಾರೆ. ಹಸುವನ್ನು ಕಡಿದು ಮಾಂಸ ಮಾರಾಟ ಮಾಡುತ್ತಿದ್ದಾರೆ. ಗೋಮಾತೆಗೆ ಆಗುತ್ತಿರುವ ಅನ್ಯಾಯ ನೋಡಿಕೊಂಡು ಕುಳಿತರೆ ಬದುಕಿದ್ದರೂ ಸತ್ತಂತೆ. ಯಾರಾದರೂ ಗೋವು ಕಡಿದರೆ ಅವರ ಕೈಯನ್ನು ಕಡಿಯುತ್ತೇವೆಂದು ತೀರ್ಮಾನ ಮಾಡೋಣ. ಗೋ ರಕ್ಷಣೆಯಾಗಬೇಕು, ಅತ್ಯಾಚಾರ ನಿಲ್ಲಿಸಬೇಕು.

– ಕೆ.ಎಸ್.ಈಶ್ವರಪ್ಪ ಮಾಜಿ ಡಿಸಿಎಂ

ಎಎಪಿ, ಬಿಜೆಪಿ, ಕಾಂಗ್ರೆಸ್ ತ್ರಿಕೋನ ಸ್ಪರ್ಧೆ | ಹ್ಯಾಟ್ರಿಕ್ ಸಾಧನೆಗೆ ಎಎಪಿ ಭಾರೀ ಯತ್ನ | ಅಧಿಕಾರಕ್ಕಾಗಿ ಬಿಜೆಪಿ, ಕಾಂಗ್ರೆಸ್ ಪ್ರಯತ್ನ

ದೆಹಲಿ ವಿಧಾನಸಭೆ: ಇಂದು ಮತದಾನ

ದೆಹಲಿ: 70 ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯುತ್ತಿದ್ದು, ಬುಧವಾರ ಬೆಳಗ್ಗೆ 7ರಿಂದ ಸಂಜೆ 6ವರೆಗೂ ಮತದಾನ ನಡೆಯಲಿದೆ. ಕೇಂದ್ರಾಡಳಿತ ಪ್ರದೇಶ ದೆಹಲಿ ವ್ಯಾಪ್ತಿಯ 1.55 ಕೋಟಿ ಮತದಾರರು ಸಾಂವಿಧಾನಿಕ ಹಕ್ಕು ಚಲಾಯಿಸಲಿದ್ದಾರೆ. ಫೆ.8ಕ್ಕೆ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ.

ಈ ಬಾರಿ ಆಮ್ ಆದ್ಮಿ ಪಕ್ಷ(ಎಎಪಿ) ಮತ್ತು ಬಿಜೆಪಿ ನಡುವೆ ನಿಕಟ ಸ್ಪರ್ಧೆಯಿದ್ದರೆ, ಕಾಂಗ್ರೆಸ್ ಪಕ್ಷದ ಪ್ರಬಲ ಉಪಸ್ಥಿತಿಯು ಚುನಾವಣೆಯನ್ನು ತ್ರಿಕೋನ ಸ್ಪರ್ಧೆಯ ಕಣವನ್ನಾಗಿಸಿದೆ. ಚುನಾವಣಾ ಬಹಿರಂಗ ಪ್ರಚಾರದ ಕೊನೆಯ ದಿನವಾದ ಸೋಮವಾರ ಮೂರೂ ಪಕ್ಷಗಳು ದಿಗ್ಗಜ ನಾಯಕರನ್ನು ಪ್ರಚಾರ ಕಾರ್ಯದಲ್ಲಿ ತೊಡಗಿಸಿದ್ದವು.

ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ ಮತ್ತು ಬಿಜೆಪಿ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಬಿಜೆಪಿ ಅಭ್ಯರ್ಥಿಗಳ ಪರ ಸೋಮವಾರ ದಿನವಿಡೀ ಪ್ರಚಾರ ನಡೆಸಿದರು.

ಎಎಪಿ ನಾಯಕ ಅರವಿಂದ್ ಕೇಜ್ರಿವಾಲ್ ಸ್ವತಃ ನವದೆಹಲಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿದ್ದರೂ ಹಾಲಿ ಸಿಎಂ ಅತಿಶಿ ಅವರ ಕ್ಷೇತ್ರದ ವಿವಿಧೆಡೆ ಸೋಮವಾರ 3 ರ್‍ಯಾಲಿ ನಡೆಸಿದರು. ಕಾಂಗ್ರೆಸ್ ಅಭ್ಯರ್ಥಿಗಳ ಪರವಾಗಿ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಪ್ರಚಾರ ಕಣದಲ್ಲಿದ್ದರು. ಕಲ್ಕಾಜಿ ಮತ್ತು ಕಸ್ತೂರ್‌ಬಾ ನಗರ ಕ್ಷೇತ್ರಗಳಲ್ಲಿ ಅಣ್ಣ-ತಂಗಿ ರೋಡ್ ಶೋ ನಡೆಸಿದರು.

- ದೆಹಲಿ ವಿಧಾನಸಭಾ ಕ್ಷೇತ್ರ 70
- ಒಟ್ಟು ಮತದಾರರು 1.56 ಕೋಟಿ
- ಮತಗಟ್ಟೆಗಳ ಸಂಖ್ಯೆ 13,766
- ಪುರುಷ ಮತದಾರರು 83.76 ಲಕ್ಷ
- ಮಹಿಳಾ ಮತದಾರರು 72.36 ಲಕ್ಷ
- ತೃತೀಯ ಲಿಂಗಿ ಮತದಾರರು 1,267
- ವಿಶೇಷಚೇತನರಿಗೆ ಮತಗಟ್ಟೆ 733

ಸಮಾಚಾರ ಸಣ್ಣದಲ್ಲ

ಕೂಲಿ ಕಾರ್ಮಿಕರಿಗೆ ಕಾರು ಡಿಕ್ಕಿ: ದಂಪತಿ ಸಾವು

ಚಾಮರಾಜನಗರ: ಹಿಂಬದಿಯಿಂದ ಕಾರು ಗುದ್ದಿದ ಪರಿಣಾಮ ಕೂಲಿ ಕಾರ್ಮಿಕ ದಂಪತಿ ಮೃತಪಟ್ಟಿರುವ ಘಟನೆ ಗುಂಡ್ಲುಪೇಟೆ ಪಟ್ಟಣದ ಹೊರ ವಲಯದ

ಊಟಿ ರಾಷ್ಟ್ರೀಯ ಹೆದ್ದಾರಿಯ ಐಟಿಐ ಕಾಲೇಜು ಬಳಿ ನಡೆದಿದೆ. ಪಟ್ಟಣದ ಅಂಬೇಡ್ಕರ್ ಬಡಾವಣೆ ನಿವಾಸಿಗಳಾದ ವಿಶ್ವನಾಥ್ (60), ಇವರ ಪತ್ನಿ ಭಾಗ್ಯ (48) ಮೃತ ದಂಪತಿ. ಇಬ್ಬರು ಕೂಲಿ ಕಾರ್ಮಿಕರಾಗಿದ್ದು, ಕೆಲಸ ಮುಗಿಸಿ ರಸ್ತೆಯಲ್ಲಿ ನಡೆದುಕೊಂಡು ಬರುತ್ತಿದ್ದ ವೇಳೆ ಗೋಪಾಲಸ್ವಾಮಿ ಬೆಟ್ಟಕ್ಕೆ ತೆರಳಿ ವಾಪಸ್ ಮೈಸೂರು ಕಡೆಗೆ ಹೋಗುತ್ತಿದ್ದ ಕಾರು ಹಿಂಬದಿಯಿಂದ ವೇಗವಾಗಿ ಬಂದು ಗುದ್ದಿದೆ. ತಲೆಗೆ ತೀವ್ರ ಪೆಟ್ಟು ಬಿದ್ದ ಪರಿಣಾಮ ಸ್ಥಳದಲ್ಲೇ ಪತ್ನಿ ಅಸುನೀಗಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಪತಿ ಮೃತಪಟ್ಟಿದ್ದಾರೆ. ಪೊಲೀಸರು ಕಾರು ಮತ್ತು ಚಾಲಕನನ್ನು ವಶಕ್ಕೆ ಪಡೆದು, ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು ಕ್ರಮ ಕೈಗೊಂಡಿದ್ದಾರೆ.

ಲಕ್ಷ್ಮಣ್ ಮೈಸೂರಿಗಷ್ಟೆ ಸೀಮಿತ: ಬಿಜೆಪಿ ಟೀಕೆ

ಮೈಸೂರು: ಕೆಪಿಸಿಸಿ ರಾಜ್ಯ ವಕ್ತಾರರಾಗಿರುವ ಲಕ್ಷ್ಮಣ್ ಕೇವಲ ಮೈಸೂರಿಗೆ ಸೀಮಿತವಾಗಿದ್ದಾರೆ ಎಂದು ಮೈಸೂರು ಬಿಜೆಪಿ ವಕ್ತಾರ ಮೋಹನ್ ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾ ಡಿದ ಅವರು, ಕೇಂದ್ರ ಬಜೆಟ್ ಜನಪರವಾ ಗಿದೆ. ಲಕ್ಷ್ಮಣ್ ಇಲ್ಲ ಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ. ಅವರ ಆರೋಪಗಳಲ್ಲಿ ಸತ್ಯಾಂಶ ವಿಲ್ಲ. ಮೈಸೂರು– ಬೆಂಗಳೂರು ಜೋಡಿ ರೈಲು ಮಾರ್ಗ ಪೂರ್ಣಗೊಳ್ಳಲು ಪ್ರತಾಪ್ ಸಿಂಹ ಬರಬೇಕಾಯಿತು. ಅವರ ಅವಧಿಯಲ್ಲಿ ಮೈಸೂರು ಜಿಲ್ಲೆಗೆ ಸಾಕಷ್ಟು ಅನುದಾನವನ್ನು ನೀಡಲಾಗಿದೆ. ಇದನ್ನು ಸಹಿಸಲಾಗದ ಕಾಂಗ್ರೆಸ್ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರವಿದ್ದಾಗ ಕಾಂಗ್ರೆಸ್ ಸಂಸದರು ಏನು ಮಾಡಿದ್ದಾರೆಂದು ತಿಳಿಸಲಿ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿ ಮೈಸೂರು ಜಿಲ್ಲೆಗೆ ಏನು ಮಾಡಿದ್ದಾರೆಂದು ತಿಳಿಸಲಿ. ನರೇಂದ್ರ ಮೋದಿಯವರ ಆಡಳಿತದ ಅವಧಿಯಲ್ಲಿ ದೇಶ ಅಭಿವೃದ್ಧಿ ಕಂಡಿದೆ ಎಂದು ಮೋಹನ್ ಹರಿಹಾಯ್ದರು.

ಅಧಿಕಾರಿಗಳಿಂದ ಭೂ ಕಬಳಿಕೆ : ಆರೋಪ

ಮೈಸೂರು: ಎಚ್.ಡಿ.ಕೋಟೆ ತಾಲೂಕಿನಲ್ಲಿ ರೈತರ ಸೋಗಿನಲ್ಲಿ ಕೆಲ ಸರಕಾರಿ ಅಧಿಕಾರಿಗಳು ಭೂಮಿ ಕಬಳಿಸುತ್ತಿದ್ದಾರೆ ಎಂದು ರೈತ ಮುಖಂಡ ಇಂಗಲಗುಪ್ಪೆ ಕೃಷ್ಣೇಗೌಡ ಆರೋಪಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲ ಅಧಿಕಾರಿಗಳು ಭೂಗಳ್ಳರ ಜೊತೆ ಸೇರಿ ಸರಕಾರದ ಭೂಮಿಯನ್ನ ಕಬಳಿಕೆ ಮಾಡುತ್ತಿದ್ದಾರೆ. ಜಿಲ್ಲಾ ಮಟ್ಟದ ಅಧಿಕಾರಿಗಳು ಇದರ ಬಗ್ಗೆ ಗಮನಹರಿಸಬೇಕು ಎಂದು ಆಗ್ರಹಿಸಿದರು. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಗಳ ಹಾವಳಿ ಹೆಚ್ಚಾಗಿದೆ. ಅವರ ಹಾವಳಿಗೆ ರೈತರು ಊರು ಬಿಡುತ್ತಿದ್ದಾರೆ. ಪ್ರತಿನಿತ್ಯ ಒಬ್ಬರಲ್ಲ ಒಬ್ಬರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ರಾಷ್ಟ್ರೀಕೃತ ಬ್ಯಾಂಕ್ ಗಳು ನಿಗದಿತ ಸಮಯಕ್ಕೆ ರೈತರಿಗೆ, ಜನ ಸಾಮಾನ್ಯರಿಗೆ ಸಾಲ ನೀಡುತ್ತಿಲ್ಲ. ಈ ಪರಿಣಾಮ ರೈತರು, ಸಾರ್ವಜನಿಕರು ಖಾಸಗಿ ಬ್ಯಾಂಕ್ ಮತ್ತು ಮೈಕ್ರೋ ಫೈನಾನ್ಸ್ ಗಳಲ್ಲಿ ಸಾಲ ಪಡೆಯುತ್ತಿದ್ದಾರೆ. ಮೈಸೂರು ತಾಲೂಕು ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ. ಅವರ ಮೂಲಕವೇ ಎಲ್ಲ ಕೆಲಸ ನಡೆಯುತ್ತಿದೆ ಎಂದು ಆರೋಪಿಸಿದರು.

ವಿರಾಮ
ಪ್ರತಿ ಭಾನುವಾರ

ಮೈಕ್ರೋ ಫೈನಾನ್ಸ್‌ಗಳ ಸಿಬ್ಬಂದಿ ಜತೆ ಸಭೆ | ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಎಚ್ಚರಿಕೆ

ಸಾಲಗಾರರಿಗೆ ಕಿರುಕುಳ, ಹಿಂಸೆ ನೀಡಿದರೆ ನಿರ್ದಾಕ್ಷಿಣ್ಯದ ಕ್ರಮ

ಚಾಮರಾಜನಗರ: ಜಿಲ್ಲೆಯ ಯವುದೇ ಭಾಗದಲ್ಲಿ ಮೈಕ್ರೊಫೈನಾನ್ಸ್ ಕಂಪನಿಗಳು, ಲೇವಾದೇವಿದಾರರು, ಸಂಸ್ಥೆಗಳಿಂದ ಸಾಲಗಾರರಿಗೆ ಕಿರುಕುಳ ನೀಡುವುದು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಎಚ್ಚರಿಕೆ ನೀಡಿದ್ದಾರೆ.

ನಗರದ ಡಿಸಿ ಕಚೇರಿ ಸಭಾಂಗಣದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಪ್ರತಿನಿಧಿಗಳು, ಆರ್‌ಬಿಐ ಪ್ರತಿನಿಧಿ ಹಾಗೂ ಲೀಡ್ ಬ್ಯಾಂಕ್ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಲ ನೀಡುವ ಮೈಕ್ರೋ ಫೈನಾನ್ಸ್ ಕಂಪನಿಗಳು ಆರ್.ಬಿ.ಐ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಸಾಲಗಾರರು ಅಥವಾ ಅವರ ಕುಟುಂಬದ ಸದಸ್ಯರ ಮೇಲೆ ಸಾಲ ವಸೂಲಾತಿಗಾಗಿ ವಿನಾಕಾರಣ ಒತ್ತಡ ತರುವಂತಿಲ್ಲ. ಸಾಲ ಪಡೆದವರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸುವುದು, ಅವಮಾನಿಸುವುದು, ಹಿಂಸೆ ನೀಡುವಂತಿಲ್ಲ. ಸಾಲಗಾರರ ಸ್ವಾಧೀನದಲ್ಲಿರುವ ವಸ್ತುಗಳು, ಆಸ್ತಿಗಳ ಬಳಕೆಗೆ ಅಡ್ಡಿಪಡಿಸಬಾರದು ಎಂದು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಮಾತನಾಡಿ, ಸಾಲಗಾರರಿಗೆ ಶೋಷಣೆ ಮಾಡುವಂತಿಲ್ಲ. ಸಾಲ ಕಟ್ಟುವ ಸಾಮರ್ಥ್ಯವಿಲ್ಲದಿದ್ದರೂ ಬಡ್ಡಿ ಲಾಭಕ್ಕಾಗಿ ಸಾಲ ನೀಡಿ ಬಳಿಕ ಬಲವಂತದ ವಸೂಲಿಗೆ ಫೈನಾನ್ಸ್ ಕಂಪನಿಗಳು ಮುಂದಾಗಬಾರದು. ಸಾಲ ನೀಡುವ ಮುನ್ನ ಸಾಲಗಾರರ ದುಡಿಮೆ ಆದಾಯ

ನಗರದ ಡಿಸಿ ಕಚೇರಿ ಸಭಾಂಗಣದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳ ಪ್ರತಿನಿಧಿಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಮಾತನಾಡಿದರು.

ರೌಡಿಗಳಿಂದ ಬೆದರಿಕೆ ಹಾಕಿಸಬಾರದು:ಡಿಸಿ

ಸಾಲ ವಸೂಲಿ ಮಾಡಲು ಯಾವುದೇ ಬಲವಂತದ ಕ್ರಮಗಳನ್ನು ಅನುಸರಿಸಬಾರದು. ಸಾಲ ವಸೂಲಿಗಾಗಿ ರೌಡಿಗಳಿಂದ ಬೆದರಿಕೆ ಹಾಕಿಸಬಾರದು. ಸರಕಾರದ ಹೊಸ ಕಾಯಿದೆಗಳ ಪ್ರಕಾರ ಕಿರುಕುಳ ನೀಡುವ ಮೈಕ್ರೊ ಫೈನಾನ್ಸ್ ಕಂಪನಿಗಳ ವಿರುದ್ದ ಕ್ರಮವಹಿಸಲಿದ್ದೇವೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಎಚ್ಚರಿಕೆ ನೀಡಿದರು.

ನೋಡಬೇಕು. ಕಿರುಕುಳಕ್ಕೆ ಸಂಬಂಧಿಸಿದ ದೂರುಗಳು ಬಂದರೆ ನಿಯಮಾನುಸಾರ ಪ್ರಕರಣ ದಾಖಲು ಮಾಡಿ ತ್ವರಿತವಾಗಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಲೀಡ್ ಬ್ಯಾಂಕ್ ಜಿಲ್ಲಾ ಅಧಿಕಾರಿ ವಿಜಯಶ್ರೀ ಮಾತನಾಡಿ, ಮೈಕ್ರೊ ಫೈನಾನ್ಸ್ ಕಂಪನಿಗಳು ಸಾಲ ಮರುಪಾವತಿಸುವ ಶಕ್ತಿ ಅನುಗುಣ ಸಾಲ ವಿತರಿಸಬೇಕು. ನಿಗದಿತ ವೇಳೆಯ ನಂತರ ಸಾಲ ವಸೂಲಿ ಮಾಡುವಂತಿಲ್ಲ ಎಂದು ತಿಳಿಸಿದರು. ಜಿಪಂ ಸಿಇಒ ಮೋನಾ ರೋತ್, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಎಂ.ಎನ್. ಸುರೇಖ, ತಹಸೀಲ್ದಾರ, ತಾಪಂ ಇಒಗಳು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಮೈಕ್ರೋ ಫೈನಾನ್ಸ್ ಕಂಪನಿಗಳ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಕ್ಯಾನ್ಸರ್ ಜಾಗೃತಿ ಜಾಥಾ



ಕ್ಯಾನ್ಸರ್ ಜಾಗೃತಿ ಜಾಥಾ– ಉಚಿತ ಥೆರಪಿ ಚಿಕಿತ್ಸೆ ಬಗ್ಗೆ ಜಾಗೃತಿ ಅಭಿಯಾನ ನಡೆಯಿತು.

ಮಂಡ್ಯ: ನಗರದ ಜೆಸಿ ವೃತ್ತದಲ್ಲಿ ಉಚಿತ ಚಿಕಿತ್ಸಾ ಕೇಂದ್ರವಾಗಿರುವ ಗ್ರೀನ್ ಲೈಫ್ ಹೆಲ್ತ್ ಸೆಂಟರ್ ವತಿಯಿಂದ ಆಯೋಜಿಸಿದ್ದ ವಿಶ್ವ ಕ್ಯಾನ್ಸರ್ ದಿನಾಚರಣೆ ಪ್ರಯುಕ್ತ ಕ್ಯಾನ್ಸರ್ ಜಾಗೃತಿ ಜಾಥಾ– ಉಚಿತ ಥೆರಪಿ ಚಿಕಿತ್ಸೆ ಬಗ್ಗೆ ಜಾಗೃತಿ ಅಭಿಯಾನ ನಡೆಯಿತು.

ಬಳಿಕ ಮಾತನಾಡಿದ ಗ್ರೀನ್ ಲೈಫ್ ಹೆಲ್ತ್ ಸೆಂಟರ್ ಮ್ಯಾನೇಜರ್ ಲೋಹಿತ್, ಕ್ಯಾನ್ಸರ್ ಮಾರಣಾಂತಿಕ ಕಾಯಿಲೆ ಅಲ್ಲ, ಅದರ ಬಗ್ಗೆ ಜಾಗೃತಿ ಹೆಚ್ಚಿಬೇಕಿದೆ, ಕ್ಯಾನ್ಸರ್ ನಿಂದ ನೀವು ಹೊರಗಡೆ ಬರಬಹುದು ಎಂದು ಸಲಹೆ ನೀಡಿದರು.

1 ಮತ್ತು 2ನೇ ಹಂತದಲ್ಲಿಯೇ ಕ್ಯಾನ್ಸರ್ ಲಕ್ಷಣಗಳನ್ನು ಪತ್ತೆ ಮಾಡಿಕೊಂಡು, ವೈದ್ಯರಲ್ಲಿ ಸೂಕ್ತ ಚಿಕಿತ್ಸೆ ಅಥವಾ ಗ್ರೀನ್ ಲೈಫ್ ಹೆಲ್ತ್ ಸೆಂಟರ್‌ನಲ್ಲಿ ಸಿಗುವ ಉಚಿತ ಥೆರಫಿ ಮೂಲಕ ರೋಗಮುಕ್ತ ಜೀವನ ನಡೆಸಬಹುದು ಎಂದು ನುಡಿದರು.

ಜನರಲ್ಲಿ ಒಂದು ಜಾಗೃತಿ ಮೂಡಿಸುತ್ತ, ಎಲ್ಲರೂ ನಿಮ್ಮ ನಿಮ್ಮ ಆರೋಗ್ಯದ ಬಗ್ಗೆ ಕಾಳಜಿ ಹೆಚ್ಚಿಸಿಕೊಳ್ಳಿ, ಉಚಿತ ಆರೋಗ್ಯ ಚಿಕಿತ್ಸೆಗಳಲ್ಲಿ ಮಧುಮೇಹ, ಮಂಡಿನೋವು, ಕ್ಯಾನ್ಸರ್ ನಂತಹ ಸಮಸ್ಯೆಗಳಿಗೆ ಥೆರಪಿ, ಯೋಗಾಸನ ಮೂಲಕ ಗುಣಪಡಿಸಬಹುದಾಗಿದೆ ಎಂದು ತಿಳಿಸಿದರು.

ಕ್ಯಾನ್ಸರ್‌ನ ಚಿಹ್ನೆಗಳು ಮತ್ತು ಲಕ್ಷಣಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಿ, ಹಠಾತ್ ತೂಕ ನಷ್ಟವಾಗುವುದು, ಅತಿಯಾದ ತೂಕ ನಷ್ಟ ಕ್ಯಾನ್ಸರ್‌ನ ಎಚ್ಚರಿಕೆಯ ಸಂಕೇತ. ನಿರಂತರ ನೋವು, ಯಾವುದೇ ಸ್ಪಷ್ಟ ಕಾರಣವಿಲ್ಲದೆ ಹೊಟ್ಟೆ, ಬೆನ್ನು ಅಥವಾ ಕೀಲುಗಳಲ್ಲಿ ವಿವರಿಸಲಾಗದ ನೋವು ಕ್ಯಾನ್ಸರ್‌ನ ಸೂಚನೆಯಾಗಿರಬಹುದು.

ಆದಾಗ್ಯೂ, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊ ಳ್ಳುವುದು ದೇಹ ದಲ್ಲಿ ಕ್ಯಾನ್ಸರ್ ಬರುವ ಅಪಾಯವನ್ನು ಕಡಿಮೆ ಮಾಡಲು ಅತ್ಯಂತ ಪರಿಣಾ ಮಕಾರಿ ಮಾರ್ಗಗಳಲ್ಲಿ ಒಂದಾಗಿದೆ ಎಂದರು.

ಮಂಡ್ಯ ನಗರದಲ್ಲಿ ಕಳೆದ 8 ವರ್ಷಗಳಿಂದ ಜನರಿಗೆ ಉಚಿತವಾಗಿ ಚಿಕಿತ್ಸೆ ಮತ್ತು ಥೆರಫಿ ನೀಡಲಾಗುತ್ತಿದೆ, ಸದುಪಯೋಗ ಪಡಿಸಿಕೊಳ್ಳಿ, ಯಾವುದೇ ವೆಚ್ಚವಿಲ್ಲ ಎಂದರು.

ಗ್ರೀನ್ ಲೈಫ್ ಹೆಲ್ತ್ ಸೆಂಟರ್‌ನಿಂದ ಹೊರಟ ಜಾಥಾ ನಗರದ ಜೆಸಿ ವೃತ್ತದಲ್ಲಿ ಸಮಾಪ್ತಿಯಾಯಿತು.

ವಿವಿಧ ಇಲಾಖೆಗಳು ವೃತ್ತ ಅಧಿಕಾರಿಗಳಾದ ಚನ್ನೇಗೌಡ, ಜಾರ್ಜ್ ವೆಲ್ಸನ್, ಕೈಲಾಸ್, ಸಿಬ್ಬಂದಿಗಳಾದ ಆಶಾರಾಣಿ, ವೇದಶ್ರೀ, ನಂದಿನಿ, ಶಿಲ್ಪ, ರುಕ್ಮಿಣಿ, ಆಶಾ ಮತ್ತಿತರರಿದ್ದರು.

ಸಾಮೂಹಿಕ ಸೂರ್ಯ ನಮನ

ಚಾಮರಾಜನಗರ: ರಥ ಸಪ್ತಮಿ ನಿಮಿತ್ತ ಚಾಮರಾಜನಗರದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ ಸಾಮೂಹಿಕವಾಗಿ 108 ಸೂರ್ಯ ನಮಸ್ಕಾರ ಕಾರ್ಯಕ್ರಮ ನಡೆಯಿತು. ಮಂಗಳವಾರ ಬೆಳಗ್ಗೆ 6 ಗಂಟೆಗೆ ನಗರದ ವಿಎಚ್ ಪಿ ಶಾಲಾ ಆವರಣದಲ್ಲಿ ನೂರಾರು ಯೋಗಪಟುಗಳು 108 ಸೂರ್ಯ ನಮಸ್ಕಾರ ಮಾಡಿ ಗಮನ ಸೆಳೆದರು.

ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಶಿವಕುಮಾರಸ್ವಾಮಿ, ಸೂರ್ಯ ನಮಸ್ಕಾರ ಯಜ್ಞದಲ್ಲಿ ಮಾತನಾಡಿ, ಸೂರ್ಯ ನಮಸ್ಕಾರ 12 ಯೋಗ ಭಂಗಿಗಳ ಸಂಗಮವಾಗಿದ್ದು ಸೂರ್ಯನನ್ನು ಪ್ರತ್ಯಕ್ಷ ದೇವರು ಎಂದು ಕರೆಯಲಾಗುತ್ತದೆ.

ಸೂರ್ಯ ನಮಸ್ಕಾರದಿಂದ ದೇಹ ಮತ್ತು ಮನಸ್ಸಿಗೆ ಹೊಸ ಚೈತನ್ಯ ತರಲಿದೆ ಎಂದರು.

ಯೋಗ ಶಿಕ್ಷಕ ಅಜಿತ್, ಸೇವಾಭಾರತಿ ಸಂಸ್ಥೆ ವಾಸುದೇವ್ ರಾವ್ ಇತರರು ಭಾಗಿಯಾಗಿದ್ದರು.

ಚಾಮರಾಜನಗರದಲ್ಲಿ ಸಾಮೂಹಿ ಕವಾಗಿ 108 ಸೂರ್ಯ ನಮಸ್ಕಾರ ನಡೆಯಿತು.

ರಥಸಪ್ತಮಿಗೆ ಸಾಮೂಹಿಕ ಸೂರ್ಯ ನಮಸ್ಕಾರ

ಮೈಸೂರು: ಮೈಸೂರು ಯೋಗ ಒಕ್ಕೂಟದ 24ನೇ ವಾರ್ಷಿಕೋತ್ಸವ ಹಾಗೂ ರಥಸಪ್ತಮಿ ನಿಮಿತ್ತ ಅರಮನೆ ಉತ್ತರ ದ್ವಾರದಲ್ಲಿ ಮಂಗಳವಾರ ಸಾಮೂಹಿಕ 108 ಸೂರ್ಯ ನಮಸ್ಕಾರ ಕಾರ್ಯಕ್ರಮ ನಡೆಯಿತು.

ಮೈಸೂರು ಯೋಗ ಒಕ್ಕೂಟದ ಅಧ್ಯಕ್ಷ ಕೆ.ಜಿ. ದೇವರಾಜು ಪ್ರಾಸ್ತಾವಿಕ ಭಾಷಣ ಮಾಡಿ, ಒಕ್ಕೂಟ 2001ರಲ್ಲಿ ಪ್ರಾರಂಭವಾಗಿದ್ದು, ಅನೇಕ ಯೋಗ ಮತ್ತು ಆರೋಗ್ಯ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ.

ಪ್ರತಿವರ್ಷ ರಥಸಪ್ತಮಿ ಅರಮನೆ ಉತ್ತರ ದ್ವಾರದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಾಮೂಹಿಕ 108 ಸೂರ್ಯ ನಮಸ್ಕಾರಗಳು ಹಾಗೂ ಸೂರ್ಯಯಜ್ಞ ಧಾರ್ಮಿಕ ಕಾರ್ಯಕ್ರಮ ನಡೆಸುತ್ತಿದೆ ಎಂದರು.

ಈವರೆಗೆ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆ, ಭಗವದ್ಗೀತೆ ಕಂಠಪಾಠ ಸ್ಪರ್ಧೆ, ಯೋಗ ಚಿತ್ರಕಲಾ ಸ್ಪರ್ಧೆ,ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಸರಕಾರಿ ಆಯುರ್ವೇದ ಹಾಗೂ ಜೆಎಸ್‌ಎಸ್ ಆಯುರ್ವೇದ ಕಾಲೇಜಿನ ಸಹಯೋಗದಲ್ಲಿ ಆರೋಗ್ಯ ಸಪ್ತಾಹ, ಯೋಗ ಕಾರ್ಯಾಗಾರ ನಡೆಸಲಾಗುತ್ತಿದೆ.

ಯೋಗ ಸಂಸ್ಥೆಗಳ ಜೊತೆಗೂಡಿ ಪ್ರತಿ ವರ್ಷ ಜೂ.21 ರಂದು ಯೋಗ ದಿನಾಚರಣೆ, ಬ್ರಹ್ಮಕುಮಾರಿ ಈಶ್ವರಿಯ ವಿವಿ ಜೊತೆ ಸೇರಿ ಡಿ.21 ರಂದು ವಿಶ್ವ ಧ್ಯಾನ ದಿನಾಚರಣೆ ನಡೆಸಲಾಗುತ್ತಿದೆ ಎಂದರು.

ಸಾಮೂಹಿಕ 108 ಸೂರ್ಯ ನಮಸ್ಕಾರ ಕಾರ್ಯಕ್ರಮದಲ್ಲಿ ಯೋಗ ಒಕ್ಕೂಟದ ಗೌರವಾಧ್ಯಕ್ಷ ಡಾ.ಎ.ಎಸ್. ಚಂದ್ರಶೇಖರ್ ಮತ್ತಿತರ ಪದಾಧಿಕಾರಿಗಳಿದ್ದರು.

ಯೋಗ ಒಕ್ಕೂಟದ ಗೌರವಾಧ್ಯಕ್ಷ ಡಾ.ಎ.ಎಸ್. ಚಂದ್ರಶೇಖರ್‌ಅಧ್ಯಕ್ಷತೆ ವಹಿಸಿದ್ದರು. ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಗೌರವಾಧ್ಯಕ್ಷ ಟಿ. ಜಲೇಂದ್ರಕುಮಾರ್, ಕಾರ್ಯಾಧ್ಯಕ್ಷ ಡಾ.ಬಿ.ಪಿ. ಮೂರ್ತಿ, ಶಾಂತರಾಮ್, ಎಂ.ಎಸ್. ಶಿವಪ್ರಕಾಶ್, ಉಪಾಧ್ಯಕ್ಷ ಎಂ.ಎಸ್. ರಮೇಶ್‌ಕುಮಾರ್, ಆಶಾ ದೇವಿ, ಪ್ರಧಾನ ಕಾರ್ಯದರ್ಶಿ ಯೋಗ ಕುಮಾರ್, ಖಜಾಂಚಿ ನರಸಿಂಹ, ರಾಜಶೇಖರ್, ಶುಭಲಕ್ಷ್ಮಿ, ಎಸ್,. ಪುರುಷೋತ್ತಮ್, ಶಿಲ್ಪಾ ಪ್ರಶಾಂತ್, ಕೆ. ಚಂದ್ರು, ಕುಮುದಾ, ಮಣಿಕಂಠನ್, ಎಂ.ಡಿ. ರಾಜಶೇಖರಮೂರ್ತಿ ಇದ್ದರು.

ಯೋಗ ಕೇಂದ್ರಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು, ವಿದೇಶಿಯರು ಭಾಗವಹಿಸಿ ನಾಲ್ಕು ಭಾಗಗಳಲ್ಲಿ 108 ಸೂರ್ಯ ನಮಸ್ಕಾರಗಳನ್ನು ಸಲ್ಲಿಸಿದರು. ಒಕ್ಕೂಟದ ಪದಾಧಿಕಾರಿಗಳು ಎಲ್ಲರಿಗೂ ಪ್ರಸಾದದ ವ್ಯವಸ್ಥೆ ಮಾಡಿದ್ದರು.

ಸವಿತಾ ಸಮಾಜದಿಂದ ರಕ್ತದಾನ ಶಿಬಿರ

ಮಡಿಕೇರಿ: ಸಮಾಜದಲ್ಲಿ ಬಹಳ ಸಣ್ಣ ಪ್ರಮಾಣದ ಸಂಖ್ಯೆಯಲ್ಲಿದ್ದರೂ ಸವಿತಾ ಸಮಾಜದವರು ಬಹಳ ಮುಖ್ಯ ಪಾತ್ರವನ್ನು ವಹಿಸುತ್ತಾರೆ ಎಂದು ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ನಗರಸಭಾ ಸದಸ್ಯ ಬಿ.ವೈ. ರಾಜೇಶ್ ಶ್ಲಾಘಿಸಿದ್ದಾರೆ.

ನಗರದ ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ಸವಿತಾ ಮಹರ್ಷಿ ಜಯಂತಿಗೆ ಸವಿತಾ ಸಮಾಜದ ವತಿಯಿಂದ ನಡೆದ ಕ್ರೀಡಾಕೂಟ ಮತ್ತು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಸವಿತಾ ಸಮಾದವರು ಇತ್ತೀಚಿನ ವರ್ಷಗಳಲ್ಲಿ ಇತರ ಸಮಾಜಗಳಂತೆ ಸಂಘಟಿತರಾಗುವ ಮೂಲಕ ತಮ್ಮ ಸಮಾಜಕ್ಕೆ ಅಗತ್ಯ ಸೌಲಭ್ಯ ಪಡೆಯುವಲ್ಲಿ ಯಶಸ್ವಿಯಾಗುತ್ತಿದ್ದಾರೆ. ಸವಿತಾ ಸಮಾಜದ ಕೆಲವು ಬೇಡಿಕೆಗಳ ಬಗ್ಗೆ ಶಾಸಕರ ಗಮನ ಸೆಳೆದು ಅವುಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು. ಪತ್ರಕರ್ತ ಅನಿಲ್ ಎಚ್.ಟಿ. ಮಾತನಾಡಿ, ಹಿಂದಿನ ಕಾಲದಲ್ಲಿ ದೇವರಿಗೆ ಕ್ಷೌರಮಾಡುವಲ್ಲಿಯೂ ಖ್ಯಾತರಾಗಿದ್ದ ಸವಿತಾ ಸಮಾಜದವರು ದೇವರ ಜತೆಗೇ ಧ್ಯಾನ ಕೂಡ ಮಾಡುವ ಪುಣ್ಯ ಪಡೆದಿದ್ದರೆಂದು ಉಲ್ಲೇಖವಿದೆ ಎಂದರು. ರಕ್ತದಾನ ಮಾಡುವ ಮೂಲಕ ಜಿಲ್ಲಾ ರಕ್ತನಿಧಿ ಕೇಂದ್ರಕ್ಕೆ ಹೆಚ್ಚಿನ ರಕ್ತ ಪೂರೈಸುವ ಕೆಲಸ ಆಗಬೇಕು. ಜಿಲ್ಲಾ ರಕ್ತನಿಧಿಗೆ ಮಾಸಿಕ 500 ಯೂನಿಟ್ ರಕ್ತದ ಬೇಕಿದ್ದು ವಿವಿಧ ಸಂಘಸಂಸ್ಥೆಗಳು ಸವಿತಾ ಸಮಾದವರಂತೆ ರಕ್ತಸಂಗ್ರಹ ಶಿಬಿರಗಳನ್ನು ಆಯೋಜಿಸುವಂತಾಗಬೇಕೆಂದು ಮನವಿ ಮಾಡಿದರು. ಸವಿತಾ ಸಮಾಜದ ಕ್ರೀಡಾ ಸಮಿತಿ ಅಧ್ಯಕ್ಷ ಮಧುಚೆಟ್ಟಿಮಾನಿ, ಬ್ಲಡ್ ಫೌಂಡೇಷನ್ ಅಧ್ಯಕ್ಷ ವಿನು, ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೆ.ಎಸ್. ದೋರೇಶ್ ,ಮಡಿಕೇರಿ ಅಧ್ಯಕ್ಷ ಎಂ.ಟಿ.ಮಧು, ಮಹಿಳಾಧ್ಯಕ್ಷೆ ಆರ್.ಬಿ.ವಸಂತಿ, ಗೌರವಾಧ್ಯಕ್ಷೆ ಸುಂದರಮ್ಮ, ಸಮಾಜದ ಗೌರವಾಧ್ಯಕ್ಷ ಈರಪ್ಪ, ನಗರಾಧ್ಯಕ್ಷ ಸಂದೇಶ್, ರಕ್ತನಿಧಿ ಕೇಂದ್ರದ ಡಾ. ತೇಜಸ್ವಿನಿ ವೇದಿಕೆಯಲ್ಲಿದ್ದರು.

ಕೃಷಿ ಸಂಘದ ಅಧ್ಯಕ್ಷರ ಆಯ್ಕೆ

ಕೆ.ಆರ್.ಪೇಟೆ: ತಾಲೂಕಿನ ಹೊಸಹೊಳಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಚ್.ಕೆ.ಅಶೋಕ್ ಹಾಗೂ ನೂತನ ಉಪಾಧ್ಯಕ್ಷರಾಗಿ ಚಂದ್ರಶೇಖರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ನೂತನ ಆಡಳಿತ ಮಂಡಳಿಗೆ ಚುನಾವಣೆ ನಡೆದಿತ್ತು. ಸಂಘದ ಅಧ್ಯಕ್ಷ ಸ್ಥಾನ ಬಯಸಿ ಕೃಷ್ಣಪ್ಪ ಹಾಗೂ ಚಂದ್ರಶೇಖರ್ ನಾಮಪತ್ರ ಸಲ್ಲಿಸಿದ್ದರು. ನಂತರ ಬೆಳವಣಿಗೆಯಲ್ಲಿ ನಾಮಪತ್ರ ವಾಪಸ್ ಪಡೆದ್ದರಿಂದ ಅಧ್ಯಕ್ಷರಾಗಿ ಅಶೋಕ್, ಉಪಾಧ್ಯಕ್ಷರಾಗಿ ಚಂದ್ರಶೇಖರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿ ಆನಂದನಾಯ್ಕ ಅವರು ಘೋಷಿಸಿದರು.

ನೂತನವಾಗಿ ಆಯ್ಕೆಯಾದ ಅಧ್ಯಕ್ಷ ಉಪಾಧ್ಯಕ್ಷರನ್ನು ಸಂಘದ ನಿರ್ದೇಶಕರು, ಹಿತೈಷಿಗಳು, ಅಭಿಮಾನಿಗಳು ಶಾಲು ಹೊದಿಸಿ ಬೃಹತ್ ಗಾತ್ರದ ಹೂವಿನ ಹಾರ ಹಾಕಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಬಳಿಕ ಮಾತನಾಡಿದ ಹಿರಿಯ ಮುಖಂಡ ಚಿಕ್ಕೇಗೌಡ, ರಾಜಕಾರಣ ಬದಿಗೊತ್ತಿ ಆಡಳಿತ ಮಂಡಳಿ ಬಿಗಿ ಇದ್ದರೆ ಸಂಘ ಅಭಿವೃದ್ಧಿ ಆಗುವಲ್ಲಿ ಸಂಶಯವಿಲ್ಲ. ಸಂಘದ ಷೇರುದಾರರಿಗೆ ಸಕಾಲಕ್ಕೆ ಸಾಲಸೌಲಭ್ಯ ನೀಡುವ ಮೂಲಕ ಆರ್ಥಿಕ ಪ್ರಗತಿ ಸಾಧಿಸುತ್ತಿದೆ.ಆದ್ದರಿಂದ ಸಂಘಕ್ಕೆ ಹೆಚ್ಚು ಸದಸ್ಯತ್ವ ಪಡೆಯುವಂತೆ ಸಲಹೆ ನೀಡಿದರು.

ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಶೋಕ್ ಮಾತನಾಡಿ, ಪಕ್ಷಾತೀತವಾಗಿ ನನ್ನನ್ನು ಸರ್ವಾನುಮತದಿಂದ ಆಯ್ಕೆ ಮಾಡಿದ ಸಂಘದ ಜೆಡಿಎಸ್ ಬಿಜೆಪಿ ಹಾಗೂ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರಿಗೆ ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಈ ವೇಳೆ ನೂತನ ಉಪಾಧ್ಯಕ್ಷ ಚಂದ್ರಶೇಖರ್, ಹಿರಿಯ ಮುಖಂಡ ರಾಮೇಗೌಡ,ಸಂಘದ ಮಾಜಿ ಅಧ್ಯಕ್ಷ ನಾಗರಾಜು, ಪುರಸಭಾ ಸದಸ್ಯ ಅಶೋಕ್ ಎಚ್ ಡಿ, ನಿರ್ದೇಶಕರಾದ ಪ್ರಕಾಶ್, ಯೋಗೇಶ್,ಕೃಷ್ಣೇಗೌಡ,ಕೃಷ್ಣಪ್ಪ, ಶಶಿಧರ್, ಗೀತಾ ಇದ್ದರು.

ಹೊಸಹೊಳಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಎಚ್.ಕೆ.ಅಶೋಕ್, ಉಪಾಧ್ಯಕ್ಷ ಚಂದ್ರ ಶೇಖರ್ ಅವರನ್ನು ಅಭಿನಂದಿಸಲಾಯಿತು.

ಸರಕಾರಿ ಆಸ್ತಿ ಅನ್ಯರಿಗೆ ಖಾತೆ

ದಸಂಸ ಸಂಚಾಲಕ ಬನ್ನಹಳ್ಳಿ ಸೋಮಣ್ಣ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು

ತಿ.ನರಸೀಪುರ: ಸಂಗೀತರತ್ನ ಟಿ.ಚೌಡಯ್ಯ ಸ್ಮಾರಕಕ್ಕೆ ಸೇರಿದ ಜಾಗವನ್ನು ಪುರಸಭೆ ಮುಖ್ಯಾಧಿಕಾರಿ ರಾಜಕೀಯ ಪ್ರಭಾವಕ್ಕೆ ಮಣಿದು ಖಾಸಗಿ ವ್ಯಕ್ತಿಗೆ ಖಾತೆ ಮಾಡಿದ್ದಾರೆ ಎಂದು ದಲಿತ ಸಂಘರ್ಷ ಸಮಿತಿ ಸಂಚಾಲಕ ಬನ್ನಹಳ್ಳಿ ಸೋಮಣ್ಣ ಆರೋಪಿಸಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪಟ್ಟಣದ ಬೈರಾಪುರದ ಸ.ನಂ.58ರ 1.02 ಎಕರೆ ಪೈಕಿ 12 ಗುಂಟೆ ಜಮೀನನ್ನು 1972ರಲ್ಲಿ ಟಿ. ಚೌಡಯ್ಯ ಮೆಮೋರಿಯಲ್ ಗಾಯನ ಸಮಾಜಕ್ಕೆ ಸರಕಾರ ಮಂಜೂರು ಮಾಡಿದ್ದು, ಆರ್ ಟಿಸಿ ಮತ್ತು ಎಂಆರ್ ನಲ್ಲಿ ಯಥಾವತ್ ನಮೂದಾಗಿರುತ್ತದೆ. ಅಲ್ಲದೆ 2002ರಲ್ಲಿ ಖಾತೆ ಹಾಗೆಯೇ ಮುಂದುವರೆದಿದೆ ಎಂದರು.

ಆದರೆ ಇತ್ತೀಚೆಗೆ ಪುರಸಭೆ ಮುಖ್ಯಾಧಿಕಾರಿ ಈ ಜಮೀನನ್ನು ಸಂಗೀತ ರತ್ನ ಟಿ. ಚೌಡಯ್ಯ ಸ್ಮಾರಕ ಭವನ ಟ್ರಸ್ಟ್ ಎಂದು ತಿದ್ದುಪಡಿ ನಮೂದು ಮಾಡಿ ಖಾತೆ ಮಾಡಲಾಗಿದೆ. ಖಾತೆ ಮಾಡಿರುವ ಕೆಎಂಎಫ್ ನಲ್ಲಿ ಡಬ್ಲ್ಯೂ 5461/1999 ಕೋರ್ಟ್ ಆದೇಶ ಎಂದು ನಮೂದಾಗಿದೆ. ಆದರೆ, ಟಿ.ಚೌಡಯ್ಯ ಸ್ಮಾರಕ ಟ್ರಸ್ಟ್ 2010ರಲ್ಲಿ ನೋಂದಣಿಯಾಗಿದೆ. ಹಾಗಾಗಿ ಟಿ.ಚೌಡಯ್ಯ ಮೆಮೋರಿಯಲ್ ಗಾಯನ ಸಮಾಜಕ್ಕೆ ಸೇರಿದ ಕೋಟ್ಯಂತರ ರೂ. ಬೆಲೆಬಾಳುವ ಜಾಗವನ್ನು ಹಣದ ಆಮಿಷಕ್ಕೆ ಮಣಿದು ಖಾತೆ ಮಾಡಿರುವ ಪುರಸಭೆ ಮುಖ್ಯಾಧಿಕಾರಿ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಮತ್ತು ಖಾತೆಯನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ತಾಲೂಕು ಪ್ರಧಾನ ಕಾರ್ಯದರ್ಶಿ ಕನ್ನಹಳ್ಳಿ ಶಿವಕುಮಾರ್, ಜಿಲ್ಲಾ ಸಂಚಾಲಕ ವಾಟಾಳು ನಾಗರಾಜು, ಜಿಲ್ಲಾ ವಿದ್ಯಾರ್ಥಿ ಸಂಘದ ಧಮ್ಮ ಅಶೋಕ, ಕನ್ನಹಳ್ಳಿ ಸೋಮಣ್ಣ, ತಾಲೂಕು ಖಜಾಂಚಿ ಡಣಾಯಕಪುರ ಬಸವಣ್ಣ, ಹಿರಿಯೂರು ಮಹದೇವ ಇದ್ದರು.

ಕೊಳ್ಳೇಗಾಲಕ್ಕೆ 25 ಕೋಟಿ ಬಿಡುಗಡೆ: ಶಾಸಕ

ಚಾಮರಾಜನಗರ: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಅಭಿವೃದ್ದಿಗಾಗಿ ಮತ್ತೆ 25 ಕೋಟಿ ಅನುದಾನ ನೀಡಿದ್ದಾರೆ ಎಂದು ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ಹೇಳಿದರು.

ತಾಲೂಕಿನ ಬಾಗಳಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ಅನುದಾನದಡಿ 20 ಲಕ್ಷ ರೂ.ವೆಚ್ಚದಲ್ಲಿ ನಿರ್ಮಿಸುವ ಸಿಮೆಂಟ್ ರಸ್ತೆ ಕಾಮಗಾ ರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.

ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಕ್ಕೆ ಯಳಂದೂರು, ಕೊಳ್ಳೇಗಾಲ ಹಾಗೂ ಚಾಮರಾಜನಗರ ತಾಲೂಕು ಸಂತೇಮರಹಳ್ಳಿ ಭಾಗ ಸೇರ್ಪಡೆಯಾಗಿದ್ದು, ಇಲ್ಲಿ ಯಾರೇ ಶಾಸಕರಾದರೂ ಮೂರು ತಾಲೂಕುಗಳನ್ನು ಮಕ್ಕಳಂತೆ ಕಾಣಬೇಕಾಗುತ್ತದೆ. ಮುಖ್ಯಮಂತ್ರಿ ಕಳೆದ ಬಾರಿ 25 ಕೋಟಿ ಅನುದಾನ ಒದಗಿಸಿಕೊಟ್ಟಿದ್ದರು. ಈ ವರ್ಷವೂ ಕೂಡ ಮತ್ತೆ 25 ಕೋಟಿ ರೂ. ಅನುದಾನ ನೀಡಿದ್ದಾರೆ. ಇದಲ್ಲದೆ ಲೋಕೋಪಯೋಗಿ ಇಲಾಖೆ, ಗ್ರಾಮೀಣ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಇಲಾಖೆ ಹೀಗೆ ವಿವಿಧ ಇಲಾಖೆಗಳ ಮೂಲಕ ಹೆಚ್ಚಿನ ಅನುದಾನ ಕ್ಷೇತ್ರಕ್ಕೆ ಕೊಟ್ಟಿದ್ದಾರೆ ಎಂದರು.

ಹಿಂದೆ ಇಷ್ಟೊಂದು ದೊಡ್ಡ ಪ್ರಮಾಣದ ಅನುದಾನ ಬರುತಿರಲಿಲ್ಲ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳಿಗೆ 56 ಸಾವಿರ ಕೋಟಿ ಮೀಸಲಿಟ್ಟಿದ್ದರು. ಹಾಗಾಗಿ ಕ್ಷೇತ್ರದ ಜನರ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಈ ಮೂಲಕ ಅಭಿನಂದಿಸುತ್ತೇನೆ ಎಂದರು. ಗ್ಯಾರಂಟಿ ಯೋಜನೆಗಳ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ವಿ. ಚಂದ್ರು, ಜಿ.ಪಂ. ಮಾಜಿ ಸದಸ್ಯ ಯೋಗೇಶ್, ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ, ಗ್ರಾ.ಪಂ.ಅಧ್ಯಕ್ಷೆ ರತ್ನಮ್ಮ, ಮಾಜಿ ಉಪಾಧ್ಯಕ್ಷೆ ಲಕ್ಷ್ಮೀ ನಾಗರಾಜುನಾಯಕ, ಮುಖಂಡರಾದ ಬಾಗಳಿ ರೇವಣ್ಣ, ನಾಗರಾಜಪ್ಪ, ಮಹದೇವಪ್ಪ, ಕರಗಶೆಟ್ಟಿ, ಮಹದೇವಸ್ವಾಮಿ ನಾಯಕ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವಕುಮಾರ್ ಇದ್ದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ತಾಲೂಕಿನ ಬಾಗಳಿ ಗ್ರಾಮದಲ್ಲಿ ಸಿಮೆಂಟ್ ರಸ್ತೆ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದರು.

ಕೆರೆಹಳ್ಳಿ ಪಿಎಸಿಸಿಗೆ 12 ಮಂದಿ ಅವಿರೋಧ ಆಯ್ಕೆ

ಚಾಮರಾಜನಗರ: ತಾಲೂಕಿನ ಕೆರೆಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಯ ನೂತನ 2025 ರಿಂದ 2030 ರ ಅವಧಿಗೆ ನಿರ್ದೇಶಕರಾಗಿ ಸಂಘದ ಹಾಲಿ ಅಧ್ಯಕ್ಷ ಕೆರೆಹಳ್ಳಿ ನವೀನ್ ಸೇರಿದಂತೆ 12 ಮಂದಿ ಅವಿರೋಧವಾಗಿ ಆಯ್ಕೆಯಾದರು. ಗ್ರಾಮದ ಸಹಕಾರ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ 12 ಮಂದಿ ಮಾತ್ರ ನಾಮಪತ್ರ ಸಲ್ಲಿಸಿದರು. ಚುನಾವಣಾಧಿಕಾರಿಯಾಗಿದ್ದ ಡಿ.ಎಲ್. ಸುರೇಶ್ ಅಧಿಕೃತವಾಗಿ ಘೋಷಣೆ ಮಾಡಿದರು. ಸಂಘದ ಅಧ್ಯಕ್ಷ ಕೆರೆಹಳ್ಳಿ ನವೀನ್, ಕೆ. ನಾಗರಾಜಯ್ಯ, ಬಸುಮರಿ, ಮಹದೇವಯ್ಯ, ಎಂ.ಪಿ. ರವಿ, ತಾ.ಪಂ. ಮಾಜಿ ಸದಸ್ಯ ಬಿ.ಎಸ್. ರೇವಣ್ಣ, ಮಹಿಳಾ ಮೀಸಲು ಕ್ಷೇತ್ರದಿಂದ ಸವಿತಾ, ರೇವಮ್ಮ, ಹಿಂದುಳಿದ ವರ್ಗ ಎ ಯಿಂದ ವರದರಾಜು, ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಆರ್. ಕೆಂಪರಾಜು, ಪರಿಶಿಷ್ಟ ಪಂಗಡ ದಿಂದ ಕೆ.ಬಿ. ಪುಟ್ಟರಾಜು, ಸಾಲಗಾರರಲ್ಲದ ಕ್ಷೇತ್ರದಿಂದ ರಾಜಕುಮಾರ್ ಅವಿರೋಧವಾಗಿ ಆಯ್ಕೆಯಾದವರು. ಸತತವಾಗಿ ಸಂಘಕ್ಕೆ ಅವಿರೋಧವಾಗಿ ಆಯ್ಕೆಯಾಗುತ್ತಿರುವ ಸಂಘದ ಅಧ್ಯಕ್ಷ ಹಾಗೂ ಜಿ.ಪಂ.ಮಾಜಿ ಸದಸ್ಯ ಕೆರೆಹಳ್ಳಿ ನವೀನ್ ಮಾತನಾಡಿ, ಜಿಲ್ಲೆಯಲ್ಲಿಯೇ ಮಾದರಿಯಾಗಿ ನಮ್ಮ ಸಂಘ ಬೆಳೆಯಬೇಕು. ದಿ.ಎಚ್.ಎಸ್. ಮಹದೇವಪ್ರಸಾದ್ ಸಹಕಾರ ಸಂಘದ ಅಭಿವೃದ್ದಿಗೆ ಹೆಚ್ಚಿನ ಒತ್ತು ನೀಡಿ, ಕಟ್ಟಡಕ್ಕೆ ವಿಶೇಷ ಅನುದಾನ ನೀಡಿದ್ದರು ಎಂದು ಅವರ ಸೇವೆ ನೆನೆದರು. ಮುಖಂಡರಾದ ಮುಕ್ಕಡಹಳ್ಳಿ ರವಿಕುಮಾರ್, ಗ್ರಾಪಂ ಸದಸ್ಯ ಶಂಕರ್, ಹೊಸಹಳ್ಳಿ ಮಧುಸೂದನ್, ಕೆ.ಎಸ್. ರೇವಣ್ಣ, ಕೆ. ರೇವಣ್ಣ, ವೃಷಬೇಂದ್ರಪ್ಪ., ಮಲ್ಲಪ್ಪ, ಚನ್ನಬಸಪ್ಪ, ಮಹದೇವಸ್ವಾಮಿ, ಸಿಇಒ ಆರ್. ರಾಜೇಂದ್ರಕುಮಾರ್ ಇದ್ದರು.

IN THE COURT OF THE I ADDL., CIVIL JUDGE AND J.M.F.C. AT TUMAKURU
C.Mis.No: 826/2024
Petitioner: Gangadevamma W/o Late Govindaiah, Aged about 78 Years, R/o D. Koratagere Village, Guluru Hobli, Tumakuru Taluk. Now R/at No.42/1. 1st Main, new Carmel high School, Sanjeevini Nagara, Hegganahalli, Bengalore North,Bengaluru.
V/s
RESPONDENTS: 1. Registrar of Birth & Death, Deputy Tahsildar, Guluru Nada kacheri, Guluru Hobli, 2. Shobha D/o late Govindaiah, W/o Srinivas.N Aged about 58 years, R/o 494.9th Cross, Maruthi Nagara, Gubbalala, Bengaluru. 3. Vijayalakshmi D/o Late Govindaiah, w/o Late Manjunatha Aged about 56 years, R/at No. 19 1st Main Road, 5th Cross, near Omshanthi Temple, Sanjeevini Nagara, Hegganahalli, Bengaluru. 4.Varalakshmi D/o late Govindaiah, W/o late Venkataramu Aged about 52 years R/at 11 Floor, Srininivasa Apartment, S.B.I Bank. Sira Gate, Tumakuru. 5.Sharada D/o Late Govindaiah w/o Late Nagaraju Aged about 48 years, R/at Bylanjineya Temple, 2nd Cross, Hanumanthapura, Tumakuru. 6. Prema D/o late Govindaiah, W/o Ramanna, Aged about 43 years. R/at No11.8th Cross, Omshanthi temple, near Sanjeevini Nagara, Bengalore North.
PAPER PUBLICATION
WHEREAS, the Petitioner has field the above petition against the Respondents to obtain the death certificate of hear husband by name GOVINDAIAH S/o Late Karigiraiah, who had died on 10-05-2000 at the residence of the petitioner at D. Koratagere Village, Guluru Hobli, Tumakuru Taluk, Tumakuru District. If there are any other legal heirs are there they may hereby summoned to appear in the above court in person or by pleader on 15-03-2025 at 11.am to answer to the same, failing which the petition will be disposed off ex-parte.
By Order of the Court
Prl.Civil Judge & JMFC Tumakuru
Advocate for petitioner
E Yogesh Yadav, BA.LLB,
Advocate, Room No.33, TAPCMS Building, Gumchi Circle, Tumakuru.

IN THE COURT OF THE PRL CIVIL JUDGE & J.M.F.C, PAVAGADA
C.MIS.NO.116/2024
PETITIONER: K. Shivanna S/O Late Kadappa, 45 years, R/O Kadirehalli, Nidgal Hobli, Pavagada Taluk.
VS
RESPONDENTS: 1. The Deputy Tahsildar cum Registrar of Birth and Death, Nadakacheri, Mangalawada, Nidgal Hobli, Pavagada Taluk. 2. The Revenue Inspector, Nidgal Hobli, Pavagada Taluk. 3. The Village Accountant, Kadirehalli Circle, Nidgal Hobli, Pavagada Taluk. 4. Gangamma D/O Late Siddappa S/O Late Kadappa, 31 years. 5. Harisha S/O Late Siddappa S/O Late Kadappa, 29 years. 6. Ramappa S/O Late Kadappa, 50 years. 7. Jogappa S/O Late Kadappa, 48 years. 8. Eshwarappa S/O Late Kadappa, 43 years. Respondents No. 4 to 8 are all residing at: Kadirehalli, Nidgal Hobli, Pavagada Taluk.
PUBLIC NOTICE
The petitioner has filed the above petition seeking the issuance of a Death Certificate for his mother, Nagamma W/O Late Kadappa, who passed away on 05-01-2021 Any person having objections regarding the issuance of the death certificate may appear before this Honourable Court on 06-03-2025 at 11:00 A.M., either in person or through their legal counsel. If no one appears on the said date, the matter will be heard and decided ex-parte. Issued under the seal and order of the Hon'ble Court on 04-02-2025.
By the Order of CMO
PCJ & JMFC, Pavagada.
Advocate for Petitioner:
Venkateshappa,
Pavagada.

ಸಮಾಚಾರ ಸಣ್ಣದಲ್ಲ

ಕಣ್ಣು ಕಾಣದ ಕಾಡು ಕೋಣ ಓಡಾಟ

ಸಕಲೇಶಪುರ: ದೃಷ್ಟಿ ಕಳೆದುಕೊಂಡಿರುವ ದೈತ್ಯಾಕಾರದ ಕಾಡುಕೋಣವೊಂದು ತಾಲೂಕಿನ ವಿವಿಧೆಡೆ ಎಲ್ಲೆಂದರಲ್ಲಿ ಓಡಾಡುವ ಮೂಲಕ ಪರಿತಪಿಸುತ್ತಿದೆ. ಕಾಡು ತೊರೆದು ನಾಡಿಗೆ ಬಂದಿರುವ ಕಾಡುಕೋಣ ತಾಲೂಕಿನ ದೇವರುಂದ ಗ್ರಾಮದ ಬಳಿಯ ಹೋಂ ಸ್ಟೇಗೂ ಎಂಟ್ರಿ ಕೊಟ್ಟಿತ್ತು. ಕಣ್ಣು ಕಾಣದೆ ಮಣ್ಣಿನ ಗೋಡೆಗೂ ಗುದ್ದಿ ಎತ್ತ ಸಾಗಬೇಕು ಎಂಬುದು ಕಾಣದೆ ಪರಿತಪಿಸುತ್ತಿದೆ. ಹಲವು ದಿನಗಳಿಂದ ಕಣ್ಣು ಕಾಣದೆ ಹೀಗೆಯೇ ಪರದಾಡುತ್ತಿರುವ ಕಾಡುಕೋಣನನ್ನು ಕಂಡವರ ಪೈಕಿ ಕೆಲವರು ಅಯ್ಯೋ ಪಾಪ ಎಂದು ಮರುಕ ಪಡುತ್ತಿದ್ದರೆ, ಇನ್ನೂ ಕೆಲವರು, ದೊಡ್ಡ ಪ್ರಾಣಿ ಏನಾದ್ರೂ ತೊಂದರೆ ತಂದೊಡ್ಡೀತು ಎಂದು ದೈತ್ಯಾಕಾರದ ಕಾಡುಕೋಣ ಕಂಡು ಆತಂಕ ವ್ಯಕ್ತಪಡಿಸಿದರು. ಅರಣ್ಯ ಇಲಾಖೆಯವರು ಕೂಡಲೇ ಸೆರೆ ಹಿಡಿದು ಸೂಕ್ತ ಚಿಕಿತ್ಸೆ ಕೊಡಿಸುವಂತೆ ಅನೇಕರು ಒತ್ತಾಯಿಸಿದ್ದಾರೆ.

ಆರ್‌ಎಫ್‌ಒ ಭೇಟಿ: ಜನವಸತಿ ಪ್ರದೇಶದಲ್ಲಿ ಕಾಡುಕೋಣ ಓಡಾಡಿ ಆತಂಕ ಸೃಷ್ಟಿಸಿರುವ ಸುದ್ದಿ ತಿಳಿದು ಸ್ಥಳೀಯ ಆರ್‌ಎಫ್‌ಒ ಹೆಚ್.ಆರ್. ಹೇಮಂತ್ ಕುಮಾರ್ ಸಿಬ್ಬಂದಿಯೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.

ಎಟಿಎಂ ಯಂತ್ರ ನಾಲೆಯಲ್ಲಿ ಪತ್ತೆ

ಹಾಸನ: ಕಳೆದ ತಿಂಗಳು ಜನವರಿ 29 ರಂದು ಮುಂಜಾನೆ ಅರಕಲಗೂಡು ರಸ್ತೆಯ ಹನುಮಂತಪುರದಲ್ಲಿ ಕಳ್ಳತನ ಆಗಿದ್ದ ಎಟಿಎಂ ಮಿಷನ್ ನಾಲೆಯಲ್ಲಿ ಪತ್ತೆಯಾಗಿದೆ. ಹಾಸನ ಹೊರವಲಯದ ಶಂಕರನಹಳ್ಳಿ ಗ್ರಾಮದ ಬಳಿಯಿರುವ ಚಾನೆಲ್‌ನಲ್ಲಿ ಎಟಿಎಂ ಮಿಷನ್ ಕಣ್ಣಿಗೆ ಬಿದ್ದಿದೆ. ಹಣ ಎತ್ತಿಕೊಂಡು ಎಟಿಎಂ ಮಿಷನ್ ಕಳ್ಳರು ಬಿಸಾಡಿ ಹೋಗಿದ್ದಾರೆ. ಅಂದು ಹಣದ ಸಮೇತ ಇಂಡಿಯಾ ಒನ್ ಎಟಿಎಂ ಯಂತ್ರ ಕಳ್ಳರು ಹೊತ್ತೊಯ್ದಿದ್ದರು. ಸುದ್ದಿ ತಿಳಿದ ಕೂಡಲೇ ಹಾಸನ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇದನ್ನು ಆಧರಿಸಿ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

ರಾಗಿ ಖರೀದಿ ಕೇಂದ್ರ: ರೈತರು ನೋಂದಣಿ

ತುಮಕೂರು: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ನಗರದ ಎಪಿಎಂಸಿ ಯಾರ್ಡ್‌ನಲ್ಲಿರುವ ರಾಗಿ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಜಿಲ್ಲೆಯಲ್ಲಿ ತೆರೆದಿರುವ 10 ಖರೀದಿ ಕೇಂದ್ರಗಳಲ್ಲಿ ನೋಂದಣಿ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ರೈತರು ಮಧ್ಯ ವರ್ತಿಗಳನ್ನು ಸಂಪರ್ಕಿಸದೆ ನೇರವಾಗಿ ಅಧಿಕಾರಿಗಳನ್ನೇ ಸಂಪರ್ಕಿಸಬೇಕೆಂದು ಡಿಸಿ ಮನವಿ ಮಾಡಿದರು. ರಾಗಿ ಖರೀದಿಗಾಗಿ ಮಾರ್ಚ್ 31ರವರೆಗೆ ಮಾತ್ರ ಅವಕಾಶವಿದ್ದು, ರೈತರು ನೋಂದಣಿ ಮಾಡಿಸಿ ಬೆಂಬಲ ಬೆಲೆ ಯೋಜನೆಯ ಸದುಪಯೋಗ ಪಡೆಯಬೇಕೆಂದರು.

ಜನಪರ ಸಂಘಟನೆಗಳಿಂದ 'ನವ ಕರ್ನಾಟಕ ನಿರ್ಮಾಣ ಆಂದೋಲನ'

ಹೈಕಮಾಂಡ್ ಸಂಸ್ಕೃತಿ ಕಿತ್ತಸೆವ ಗುರಿ

ನಗರದಲ್ಲಿ ಜನಪರ ಸಂಘಟನೆಗಳು ಏರ್ಪಡಿಸಿದ್ದ ನವಕರ್ನಾಟಕ ನಿರ್ಮಾಣ ಆಂದೋಲನದಲ್ಲಿ ಭಕ್ತರಹಳ್ಳಿ ಬೈರೇಗೌಡ ಮಾತನಾಡಿದರು. ಕೋಡಿಹಳ್ಳಿ ಚಂದ್ರಶೇಖರ, ಮಾರಸಂದ್ರ ಮುನಿಯಪ್ಪ ಮತ್ತಿತರ ನಾಯಕರಿದ್ದರು.

ಚಿಕ್ಕಬಳ್ಳಾಪುರ: 1956ರಿಂದ ಈತನಕ ನಮ್ಮನ್ನಾಳಿರುವ ರಾಷ್ಟ್ರೀಯ ಪಕ್ಷಗಳು ಹೈಕಮಾಂಡ್ ಸಂಸ್ಕೃತಿಗೆ ಜೋತುಬಿದ್ದು ಈದೇಶದ ಬಹುಸಂಖ್ಯಾತರ ಬದುಕನ್ನು ಬೀದಿಗೆ ತಂದು ನಿಲ್ಲಿಸಿವೆ. ಜನತಾ ಪ್ರಣಾಳಿಕೆ ಆದ್ಯತೆಯಾಗಿದ್ದಿದ್ದರೆ ನಾಡಿನ ಜನರ ಬದುಕು ಹಸನಾಗುವ ಜತೆಗೆ ನೆಲ ಜಲ ಭಾಷೆ ಉದ್ಯೋಗ ಸಂಪನ್ಮೂಲಗಳ ಹಂಚಿಕೆಯಲ್ಲಿ ಸಾಮಾಜಿಕ ನ್ಯಾಯ ಪಾಲನೆಯಾಗುತ್ತಿತ್ತು ಎಂದು ವಿವಿಧ ಸಂಘಟನೆಗಳ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಜನಪರ ಸಂಘಟನೆಗಳು ಏರ್ಪಡಿಸಿದ್ದ ನವ ಕರ್ನಾಟಕ ನಿರ್ಮಾಣ ಆಂದೋಲನ - ಜನರ ನಡುವೆ ಜನತಾ ಪ್ರಣಾಳಿಕೆ ಬಹಿರಂಗ ಚರ್ಚೆಯಲ್ಲಿ ಮಾತನಾಡಿದರು.

ಬಿಎಸ್ಪಿ ರಾಜ್ಯಾಧ್ಯಕ್ಷ ಮಾರಸಂದ್ರ ಮುನಿಯಪ್ಪ ಮಾತನಾಡಿ, ನಾಡಿನ ಆಸ್ತಿಯಾದ ರೈತರು, ದಲಿತರು, ಸಾಹಿತಿಗಳು,ಜನಸಾಮಾನ್ಯ ಕನ್ನಡಿಗರು, ಮಹಿಳೆಯರು, ಕಾರ್ಮಿಕರು, ವಿದ್ಯಾರ್ಥಿಗಳು, ಯುವಜನರು, ಪೌರಕಾರ್ಮಿಕರು ತಮ್ಮ ಹಕ್ಕು ಮತ್ತು ಕನಿಷ್ಠ ಸೌಲತ್ತಿಗಾಗಿ ಬೀದಿಗಿಳಿದು ಹೋರಾಡುತ್ತಾಲೇ ಬಂದಿದ್ದಾರೆ. ಇವರ ಬದುಕು ಸುಧಾರಿಸಬೇಕಾದ ಕೇಂದ್ರ ಮತ್ತು ರಾಜ್ಯ ಸರಕಾರಗಳು ಜನಪರ ಆಯವ್ಯಯ ಮಂಡಿಸದೆ, ಬಹುರಾಷ್ಟ್ರೀಯ ಕಂಪನಿಗಳ ಕಾರ್ಪೊರೇಟ್ ಸಂಸ್ಕೃತಿಯ ವಾರಸುದಾರರಂತೆ ವರ್ತಿಸುತ್ತಿರುವುದೇ ಸಮಾಜದ ದುಸ್ಥಿತಿಗೆ ನೇರ ಕಾರಣ ಎಂದು ಕಿಡಿ ಕಾರಿದರು.

ಪ್ರಜಾಪ್ರಭುತ್ವ ಕಾಲದಲ್ಲಿಯೂ ಸ್ವಾರ್ಥ ರಾಜಕಾರಣ, ಅಧಿಕಾರ ಲಾಲಸೆ, ಕುಟುಂಬ ರಾಜಕಾರಣದ ಫಲವಾಗಿ ಕರ್ನಾಟಕದ ನೆಲೆ ಜಲಗಳು ಬರಡಾಗುತ್ತಿವೆ. ಅತಿಹೆಚ್ಚಿನ ತೆರಿಗೆ ಪಾವತಿಸುವ ರಾಜ್ಯಕ್ಕೆ ಅತ್ಯಂತ ಕಡಿಮೆ ಅನುದಾನವನ್ನು ಕೇಂದ್ರ ಸರಕಾರಗಳು ನೀಡುತ್ತಿವೆ. ಇದಕ್ಕೆ ಅಂತ್ಯ ಹಾಡಬೇಕಾದರೆ ನವ ಕರ್ನಾಟಕದ ಆಶಯವುಳ್ಳ ಜನಪರ ಪ್ರಾದೇಶಿಕ ಪಕ್ಷ ಅಧಿಕಾರಕ್ಕೆ ಬರಬೇಕಿದೆ ಎಂದರು.

ಸಮಿತಿ ಸಂಚಾಲಕ ಮೋಹನ್‌ರಾಜ್ ಮಾತನಾಡಿ, ಕಾಂಗ್ರೆಸ್, ಬಿಜೆಪಿ ಪಕ್ಷಗಳು ದೆಹಲಿಯಲ್ಲಿ ಕೂತು ಆದೇಶ ಮಾಡುತ್ತಾರೆ. ಜೆಡಿಎಸ್ ಬಿಜೆಪಿ ಜತೆ ಕೈಜೋಡಿಸಲು ಮುಂದಾಗಿದ್ದಾರೆ. ಈಗ ಪ್ರಾದೇಶಿಕ ಪಕ್ಷಗಳ ಅನಿವಾರ್ಯತೆ ಇದೆ. ಇದನ್ನು ಮನಗಂಡು ನವ ಕರ್ನಾಟಕ ನಿರ್ಮಾಣ ಆಂದೋಲನಕ್ಕೆ ನಾವು ಮುಂದಾಗಿದ್ದೇವೆ ಎಂದರು.

ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ಉತ್ತರ ಭಾರತದಲ್ಲಿ ಜನರ ಕೈಯಲ್ಲಿ ನಾವು ಆಳಿಸಿಕೊಳ್ಳಲು ಮುಂದಾಗಿದ್ದೇವೆ. ನಮ್ಮದೇ ಆದ ಸ್ಥಳೀಯ ಪಕ್ಷದ ಅಗತ್ಯವಿದೆ.ಜನಪರ ಸಂಘಟನೆಗಳ ಅಡಿಯಲ್ಲಿ ಪ್ರಾದೇಶಿಕ ಪಕ್ಷ ಬೇಕಿದೆ ಎಂದರು.

ಮಾಜಿ ಶಾಸಕ ಬಸವರಾಜ ಮಾತನಾಡಿ, ಹಿಂದಿ ಭಾಷಿಕರ ಗುಲಾಮಗಿರಿ ತೊಡೆದು,ನಮ್ಮದೇ ಪಕ್ಷ ಕಟ್ಟಿ,ನಮ್ಮ ಕೆಲಸ ನಾವೇ ತೀರ್ಮಾನ ಮಾಡಬೇಕು.ದೆಹಲಿಗುಲಾಮರ ಕೈಗೆ ಅಧಿಕಾರ ಕೊಡದಿರೋಣ ಎಂದರು. ಕೋಡಿಹಳ್ಳಿ ಚಂದ್ರಶೇಖರ ಮಾತನಾಡಿ, ಹೋರಾಟಗಾರರ ಮೇಲೆಯೇ ದೂರು ನೀಡಿ ಜೈಲಿಗೆ ಹಾಕುತ್ತಾರೆ.ಇದರ ವಿರುದ್ಧ ನಮ್ಮ ಹೋರಾಟವಿದೆ ಎನ್ನುತ್ತಾ ಪ್ರಾದೇಶಿಕ ಪಕ್ಷಗಳ ಅನಿವಾರ್ಯತೆಯಿದೆ ಎಂಬದನ್ನು ಒತ್ತಿ ಹೇಳಿದರು.

ವಾಲ್ಮೀಕಿ ನಿಗಮದ ಹಣ ಹೈದರಾಬಾದ್ ಲಿಕ್ಕರ್ ಮಾಲಿಕನ ಹೆಸರಿಗೆ ಹೇಗೆ ಹೋಗುತ್ತದೆ ಎಂಬುದನ್ನು ಸಿದ್ಧರಾಮಯ್ಯ ಹೇಳಬೇಕು. ಅಂತರಿಕ್ಷದ ಬೆಳವಣಿಗೆಯಿಂದ ರಾಜ್ಯಕ್ಕೆ ಲಾಭ ಇಲ್ಲ.ಟೋಲ್ ಹಣ ರಾಜ್ಯಕ್ಕೆ ಕೊಟ್ಟಿಲ್ಲ. ನಿಮಗೆ ಮನಸ್ಸಿಗೆ ಬಂದಂತೆ ಆಡಳಿತ ಮಾಡಲು ಚಳವಳಿಗಾರರು ಬಿಡುವುದಿಲ್ಲ. ಧಮ್ಮು ಇರುವವರನ್ನು ಲೋಕಸಭೆಗೆ, ವಿಧಾನ ಸಭೆಗೆ ಕಳಿಸಬೇಕು ಎಂದರು.

ಚರ್ಚೆಯ ಸಭೆಯಲ್ಲಿ ಪುಟ್ಟರಾಜು,ಶಿವರಾಮ್,ಎನ್. ರಮೇಶ್,ದಸ್ತಗಿರ್ ಮುಲ್ಲಾ,ರಾಧಕೃಷ್ಣ,ಅರುಣ್ ಗೌಡ,ಚನ್ನಕೃಷ್ಣಪ್ಪ, ಸೇರಿದಂತೆ ಆಲ್ ಇಂಡಿಯಾ ಬಹುಜನ ಪಾರ್ಟಿ,ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ, ರೈತ ಸಂಘ, ಹಸಿರು ಸೇನೆ ಪಕ್ಷದ ಮುಖಂಡರು ಇದ್ದರು.

ಸಾಹಿತಿ ಭೈರಪ್ಪರಿಗೆ ಹುಟ್ಟೂರಲ್ಲಿ ನಾಗರಿಕ ಸನ್ಮಾನ ಫೆ.23ರಂದು

'ನಮ್ಮ ಭೈರಪ್ಪ, ನಮ್ಮ ಹೆಮ್ಮೆ' ಎಂಬ ಲಾಂಛನ ಬಿಡುಗಡೆ ಮಾಡಲಾಯಿತು.

ಚನ್ನರಾಯಪಟ್ಟಣ: ನಾಡಿನ ಖ್ಯಾತ ಸಾಹಿತಿ, ಕಾದಂಬರಿಕಾರ, ನಮ್ಮ ತಾಲೂಕಿನ ಹೆಮ್ಮೆಯಾದ ಎಸ್.ಎಲ್.ಭೈರಪ್ಪ ಅವರಿಗೆ ಹುಟ್ಟೂರು ಸಂತೆಶಿವರ ಗ್ರಾಮದಲ್ಲಿ ಫೆ.23ಕ್ಕೆ ನಾಗರಿಕ ಸನ್ಮಾನ ಹಮ್ಮಿಕೊಳ್ಳಲಾ ಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ 'ನಮ್ಮ ಭೈರಪ್ಪ, ನಮ್ಮ ಹೆಮ್ಮೆ' ಎಂಬ ಲಾಂಛನ ಬಿಡುಗಡೆ ಮಾಡಿ ಮಾತನಾಡಿದರು.

ಸಾಹಿತಿ ಡಾ.ಎಸ್.ಎಲ್.ಭೈರಪ್ಪ ತಮ್ಮ ಹುಟ್ಟೂರಿನ ಕೆರೆ ತುಂಬಿಸಲು 4 ವರ್ಷದ ಹಿಂದೆ ಮೈಸೂರಿನಲ್ಲಿ ದಸರಾ ಉತ್ಸವ ವೇಳೆ ಅಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಮನವಿ ಸಲ್ಲಿಸಿದ್ದರಿಂದ ಯೋಜನೆಗೆ ಮಂಜೂರಾತಿ ದೊರಕಿತು. ಇದರಿಂದ ಸಂತೆಶಿವರ, ಅಗ್ರಹಾರ ಬೆಳಗುಲಿ ಸೇರಿದಂತೆ ಮೂರು ಕೆರೆಗಳಿಗೆ ನೀರು ಹರಿದು ಸುತ್ತಲಿನ 20 ಹಳ್ಳಿಗಳಿಗೆ ಅನುಕೂಲವಾಯಿತು ಎಂದರು. ದ್ಯಾವಲಾಪುರ - ರಾಂಪುರದ ಗೇಟ್ ಬಳಿಯಿಂದ ಮೆರವಣಿಗೆ ಮೂಲಕ ಗ್ರಾಮಕ್ಕೆ ಕರೆತರಲಾಗುವುದು.ಅತಿ ಹೆಚ್ಚು ಸಂಖ್ಯೆಯಲ್ಲಿ ಸಾರ್ವಜನಿಕರು, ಅವರ ಅಭಿಮಾನಿ ಗಳು ಪಾಲ್ಗೊಳ್ಳುವಂತೆ ಮನವಿ ಮಾಡಿದರು. ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿ, ಸಂಸದ ಡಾ.ಸಿ.ಎನ್. ಮಂಜುನಾಥ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ, ಈ ನೀರಾವರಿ ಯೋಜನೆ ಅನುಷ್ಠಾನಗೊಳಿಸಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಜಿಪಂ ಮಾಜಿ ಸದಸ್ಯ ಎಂ.ಎ.ರಂಗಸ್ವಾಮಿ ಮಾತನಾಡಿ, ಸಾಹಿತಿ ಭೈರಪ್ಪ ಅವರಿಗೆ ನಮ್ಮ ಅಭಿಮಾನ ವ್ಯಕ್ತಪಡಿಸಲು ಇದೊಂದು ಸದಾವಕಾಶ ವಾಗಿದ್ದು, ಎಲ್ಲರೂ ಇದರ ಸದ್ಬಳಕೆ ಮಾಡಿ ಕೊಳ್ಳ ಬೇಕು ಎಂದರು. ಭೈರಪ್ಪನವರ ಅಭಿಮಾನಿ ಬೆಂಗಳೂರಿನ ರಶ್ಮಿಗೋಖಲೆ ಮಾತನಾಡಿ, ಭೈರಪ್ಪ ತಮ್ಮ ಕೃತಿಗಳ ಮೂಲಕ ಗ್ರಾಮೀಣ ಜಗತ್ತನ್ನ ತೆರೆದಿಟ್ಟಿದ್ದಾರೆ ಎಂದು ಹೇಳಿದರು. ಗಂಗೇಗೌಡ, ಎಸ್.ಎಲ್.ಕೃಷ್ಣಾಪ್ರಸಾದ್ , ಅನಂತರಾಮು, ರಾಜಣ್ಣ, ಚಿರಂಜೀವಿ ಭಾಗವಹಿಸಿದ್ದರು.

ರಥ ಸ್ತಪಮಿ:108 ಸೂರ್ಯ ನಮಸ್ಕಾರ

ಕೋಲಾರದ ಸೋಮೇಶ್ವರ ದೇಗುಲದಲ್ಲಿ ರಥಸಪ್ತಮಿ ನಿಮಿತ್ತ ಸಾಮೂಹಿಕ ಸೂರ್ಯ ನಮಸ್ಕಾರ ನಡೆಯಿತು.

ಕೋಲಾರ: ಯೋಗ ಮತ್ತು ಪ್ರಾಣಾಯಾಮದ ಮೂಲಕ ಉತ್ತಮ ಆರೋಗ್ಯದೊಂದಿಗೆ ಆಯಸ್ಸು ಪಡೆಯಬಹುದೆಂದು ಪತಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಬಿಸಪ್ಪಗೌಡ ಹೇಳಿದರು.

ಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ ನಗರದ ಸೋಮೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಮಂಗಳವಾರ ಮುಂಜಾನೆ ನಡೆದ ರಥಸ್ತಪಮಿ ಸಾಮೂಹಿಕ 108 ಸೂರ್ಯ ನಮಸ್ಕಾರದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಿಯಮಿತ ಯೋಗಾಭ್ಯಾಸದಿಂದ ರೋಗಗ ಳಿಂದ ಮುಕ್ತಿ ಆಗುವ ಜತಗೆ ರೋಗ ಬಾರದಂತೆ ಮುಂಜಾಗ್ರತೆ ವಹಿಸಬಹುದಾಗಿದೆ ಎಂದರು.

500ಕ್ಕೂ ಹೆಚ್ಚು ಯೋಗಬಂಧುಗಳು 108 ಸೂರ್ಯ ನಮಸ್ಕಾರ ಮಾಡಿದರು. ನಂತರ ಯೋಗದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಯೋಗ ನಡಿಗೆ ಮೂಲಕ ಪತಂ ಜಲಿ ಯೋಗಮಂದಿರ ತಲುಪಿ ಅಲ್ಲಿ ಸೂರ್ಯ ಹೋಮ ಹವನ ನಡೆಸಿ ಪುನೀತರಾದರು.

ಯೋಗ ಶಿಕ್ಷಕ ಮಾರ್ಕೋಂಡಣ್ಣ ರಥಸ ಪ್ತಮಿ ಮಹತ್ವ ತಿಳಿಸಿದರು. ಸಮಿತಿ ಉಪಾಧ್ಯಕ್ಷ ಡಾ.ಜರ್ನಾರ್ಧನ್ (ರಾಜು), ಚಂದ್ರಣ್ಣ, ಕಾರ್ಯ ದರ್ಶಿ ಎಸ್.ವಿ.ವೇಣುಗೋಪಾಲ್ ಕಾರ್ಯಕ್ರ ಮದ ನೇತೃತ್ವ ವಹಿಸಿದ್ದರು. ಸಮಿತಿ ಮುಖಂಡ ಗೋವಿಂದರಾಜು, ಡಾ.ಆಶಾ, ಯೋಗ ಶಿಕ್ಷಕ ರವಿಕುಮಾರ್, ಶ್ರೀನಿವಾಸ್, ರಮೇಶ್, ಮಂಜುಳ, ಚಂದ್ರು ಇದ್ದರು.

ಬಿಜೆಪಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಹಲವರ ಪೈಪೋಟಿ | ಮೂವರ ಹೆಸರು ಹೈಕಮಾಂಡ್ ಅಂಗಳಕ್ಕೆ

ಶಾಸಕರ ಹೆಗಲಿಗೆ ಕಮಲ ಸಾರಥಿ ಹೊಣೆ!

ರಂಗನಾಥ ಕೆ. ಹೊನ್ನಮರಡಿ, ತುಮಕೂರು

ಜಿಲ್ಲೆಯಲ್ಲಿ ಕಮಲ ಪಕ್ಷ ಬಲಗೊಳಿಸುವುದು ಸದ್ಯಕ್ಕೆ ವರಿಷ್ಠರ ಮುಂದಿರುವ ಚಿಂತನೆ. ಇದಕ್ಕೆ ಹಾಲಿ ಇರುವ ತುಮಕೂರು ನಗರ ಶಾಸಕ ಜ್ಯೋತಿ ಗಣೇಶ್ ಹಾಗೂ ಗ್ರಾಮಾಂತರ ಶಾಸಕ ಸುರೇಶ್‌ಗೌಡ, ಇವರಿಬ್ಬ ರಲ್ಲಿ ಒಬ್ಬರಿಗೆ ಜಿಲ್ಲಾಧ್ಯಕ್ಷ ಸ್ಥಾನದ ಹೊಣೆ ನೀಡಿದರೆ ಹೇಗೆ ಎಂಬ ಚರ್ಚೆ ನಡೆದಿದೆ. ಜಿಲ್ಲಾಧ್ಯಕ್ಷ ಸ್ಥಾನ ದ ಮೇಲೆ ಹಲವು ಮಂದಿ ಕಣ್ಣಿಟ್ಟಿದ್ದರು. ಪ್ರಸ್ತುತ ಜಿಲ್ಲೆಯಲ್ಲಿ ಕೇವಲ ಇಬ್ಬ ರು ಬಿಜೆಪಿ ಶಾಸಕರಿದ್ದು ಮುಂದಿನ ದಿನಗಳಲ್ಲಿ ಪಕ್ಷವನ್ನು ಸದೃಢಗೊಳಿಸುವಲ್ಲಿ ಒಬ್ಬರು ಶಾಸಕರಿಗೆ ಪಕ್ಷದ ಜವಾಬ್ದಾರಿ ನೀಡಿ ಮುಂಬರುವ ಜಿಪಂ, ತಾಪಂ ಚುನಾವಣೆಗಳಲ್ಲಿ ಕಮಲಕೋಟೆ

ವರಿಷ್ಠರ ತೀರ್ಮಾನಕ್ಕೆ ಬದ್ಧ

ಜಿಲ್ಲಾ ಬಿಜೆಪಿ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಜಿಲ್ಲಾಧ್ಯಕ್ಷ ನೇಮಕ ಸಂಬಂಧ ಪಕ್ಷದ ವರಿಷ್ಠರು ತೆಗೆದುಕೊಳ್ಳುವ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಿದ್ದೇವೆ. ಪಕ್ಷವನ್ನು ಬಲಪಡಿಸುವುದು ನಮ್ಮೆಲ್ಲರ ಉದ್ದೇಶ ಎಂದು ಶಾಸಕರಿಬ್ಬರು ತಿಳಿಸಿದರು.

ಭದ್ರಪಡಿಸಲು ಪಕ್ಷದ ವರಿಷ್ಠರು ತೀರ್ಮಾನಿಸಿದ್ದಾರೆ ಎಂಬ ಮಾಹಿತಿ ಹೊರ ಬಿದ್ದಿದೆ. ಹಾಲಿ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ ಮತ್ತೊಮ್ಮೆ ಅಧ್ಯ ಕ್ಷ ಸ್ಥಾನದ ಕಡೆ ನಿರಾಸಕ್ತಿ ತೋರಿದ್ದಾರೆ.

ಅಸಮಾಧಾನ: ಬಿಜೆಪಿ ಜಿಲ್ಲಾಧ್ಯಕ್ಷರ ಚುನಾವಣೆಗೆ ನೇಮಕಗೊಂ ಡಿದ್ದ ಚುನಾವಣಾಧಿಕಾರಿ ಪೂರ್ಣಿಮಾ ಪ್ರಕಾಶ್ ಅವರು ಪಕ್ಷದ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಬಿಜೆಪಿ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮೂವರ ಹೆಸರು: ಜಿಲ್ಲೆಯಲ್ಲಿ ಕಮಲ ಪಕ್ಷದ ಸಾರಥಿ ಯಾಗಲು ಲಕ್ಷ್ಮೀಶ್. ಡಾ.ಪರಮೇಶ್, ಶಂಕರಪ್ಪ, ಸ್ಫೂರ್ತಿ ಚಿದಾನಂದ್, ವೇದಮೂರ್ತಿ, ಅಂಬಿಕಾ ಹುಲಿ ನಾಯ್ಕರ್, ರುದ್ರೇಶ್, ಶಿವಪ್ರಸಾದ್, ಚಂದ್ರಶೇಖರ್, ಭೈರಪ್ಪ, ಬ್ಯಾಟ ರಂಗೇಗೌಡ ಮುಂಚೂಣಿಯಲ್ಲಿದ್ದರು.

ಆದರೆ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಜಿಲ್ಲೆಯಿಂದ ಸುರೇಶ್ ಗೌಡ, ಜ್ಯೋತಿ ಗಣೇಶ್ ಗುಬ್ಬಿ ಕ್ಷೇತ್ರದ ಬಲರಾಮ್ ಇವರ ಹೆಸರನ್ನು ಹೈಕಮಾಂಡ್ ಅಂಗಳಕ್ಕೆ ಕಳುಹಿ ಸಲಾಗಿದ್ದು, ಜಿಲ್ಲೆಯಲ್ಲಿ ಕಮಲ ಪಾಳಯವನ್ನು ಬಲಿಷ್ಠ ಗೊಳಿಸಲು ಶಾಸಕರಾದ ಸುರೇಶ್ ಗೌಡ ಅಥವಾ ಜ್ಯೋತಿ ಗಣೇಶ್ ಇವರಲ್ಲಿ ಒಬ್ಬರಿಗೆ ಪಕ್ಷ ದ ಜವಾಬ್ದಾರಿ ನೀಡುವ ನಿಚ್ಚಳ ಸಾಧ್ಯತೆ ಗಳಿವೆ.

ಸನಾತನ ಪರಂಪರೆಗೆ ಅಪಮಾನ ಸಹಿಸುವುದಿಲ್ಲ

ಭಾರತೀಯ ಸಂಸ್ಕೃತಿ ಉತ್ಸವದಲ್ಲಿ ಶಾಸಕ ಯತ್ನಾಳ್ ಎಚ್ಚರಿಕೆ | ಸನಾತನ ಸಂಸ್ಕೃತಿ ರಕ್ಷಣೆ ನಮ್ಮ ಧ್ಯೇಯವಾಗಲಿ

ಕಲಬುರಗಿ: ನಮ್ಮ ಸನಾತನದ ಸಂಸ್ಕೃತಿ ಹಾಗೂ ಪರಂಪರೆಗೆ ಆಗುತ್ತಿರುವ ಅಪಮಾನಗಳನ್ನು ನಾವು ಎಂದಿಗೂ ಸಹಿಸುವುದಿಲ್ಲ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಚ್ಚರಿಕೆ

ಸೇಡಂ ತಾಲೂಕಿನ ಬೀರನಳ್ಳಿಯ ಪ್ರಕೃತಿ ನಗರದಲ್ಲಿ ನಡೆಯುತ್ತಿರುವ ಕೊತ್ತಲ ಸ್ವರ್ಣ ಜಯಂತಿ ಹಾಗೂ ಏಳನೇ ಭಾರತೀಯ ಸಂಸ್ಕೃತಿ ಉತ್ಸವದಲ್ಲಿ ಮಂಗಳವಾರ 'ಪ್ರಕೃತಿ ಮತ್ತು ನಾವು' ಸಮ್ಮೇಳನ ಉದ್ಘಾಟಿಸಿ ಯತ್ನಾಳ್ ಮಾತನಾಡಿದರು.

ದೇಶದಲ್ಲಿ ಪ್ರಕೃತಿಯೊಂದಿಗೆ ವಿಕೃತ ಮನುಸ್ಸುಗಳು ದಿನನಿತ್ಯ ಚೆಲ್ಲಾಟವಾಡುತ್ತಿವೆ. ಇತ್ತೀಚೆಗೆ ಚಾಮರಾಜಪೇಟೆಯಲ್ಲಿ ಗೋವಿನ ಕೆಚ್ಚಲು ಕೊಯ್ದಿದ್ದು ಸನಾತನ ಧರ್ಮಕ್ಕೆ ದೊಡ್ಡ ಅಪಮಾನ ಮಾಡಿದ್ದಾರೆ ಎಂದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಎಂದರೆ ಕೇವಲ ರಸ್ತೆ ನಿರ್ಮಾಣ, ವಿಮಾನ ನಿಲ್ದಾಣ ಮಾಡುವುದು, ಡ್ಯಾಂ ಕಟ್ಟಿಸುವುದು ಅಷ್ಟೇ ಅಲ್ಲ. ಬದಲಾಗಿ ನಮ್ಮ ಸಂಸ್ಕೃತಿ, ನಮ್ಮತನ, ನಮ್ಮವರನ್ನು ಉಳಿಸಿಕೊಂಡು ನಮಗೆ ಸಂಬಂಧ ಪಟ್ಟ ದೇವರ ಉಳಿವಿಗಾಗಿ ಕೆಲಸ ಮಾಡುವುದು ಕೂಡ ನಮ್ಮ ಮೂಲ ಉದ್ದೇಶವಾಗಿರಬೇಕು. ಕೆಚ್ಚಲು ಕೊಯ್ಯುವಂತಹ ಘಟನೆಗಳು ರಾಜ್ಯದಲ್ಲಿ ನಡೆಯುತ್ತಿದ್ದರು ನಾವು ಸುಮ್ಮನೆ ಕೂರುವುದು ಸರಿಯಲ್ಲ. ಸ್ವಾಭಿಮಾನಿಯಾಗಿ ನಮ್ಮತನವನ್ನು ಉಳಿಸುವುದು ನಮ್ಮ ಹಕ್ಕು ಎಂದು ಹೇಳಿದರು.

ನಿಸರ್ಗದ ಜತೆ ಚೆಲ್ಲಾಟ ನಿಲ್ಲಿಸಿ: ನಿಸರ್ಗದ ಜತೆಗೆ ಚೆಲ್ಲಾಟ ಕೂಡಲೇ ನಿಲ್ಲಿಸಬೇಕು. ಪ್ರಕೃತಿಯ ವಿರುದ್ಧವಾದ ಕಾರ್ಯಗಳಿಗೆ ಕೈಹಾಕಿದಾಗ ಅದಕ್ಕೆ ತಕ್ಕವಾದ ಪಾಠ ಪ್ರಕೃತಿಯಿಂದ ಎದುರಿಸಬೇಕಾಗುತ್ತದೆ. ಪ್ರಕೃತಿಗೆ ಪ್ರಿಯವಾದ ಗೋವಿನ ಉಳಿವಿಗೆ ವಿಜಯಪುರದಲ್ಲಿ 45ರಿಂದ ಪ್ರಾರಂಭವಾದ ಗೋಶಾಲೆ, ಇದೀಗ 1000 ಗೋವುಗಳುಳ್ಳ ಅತಿದೊಡ್ಡ ಗೋಶಾಲೆಯಾಗಿ ಹೊರಹೊಮ್ಮಿದೆ ಎಂದು ಯತ್ನಾಳ್ ವಿವರಿಸಿದರು.

ತ್ಯಾಗಮಯ ಜೀವನದಿಂದ ಶಾಂತಿ

ಪ್ರಕೃತಿಯು ನಮಗೆ ತ್ಯಾಗಮಾಡಿದಂತೆ ನಾವು ಪ್ರಕೃತಿಗೆ ತ್ಯಾಗಮಾಡುವ ಮನಸ್ಥಿತಿ ಬೆಳೆಸಿಕೊಂಡಾಗ ವಿಶ್ವಶಾಂತಿ ಮೂಡುತ್ತದೆ. ವ್ಯಕ್ತಿ ವಿಕಾಸ, ಕುಟುಂಬ ವಿಕಾಸ, ಸಮಾಜದ ಪರಿಕಲ್ಪನೆ ಮೂಡಿಸಿಕೊಂಡು ಶಾರೀರಿಕ, ಮಾನಸಿಕ, ಬೌದ್ಧಿಕ ಮತ್ತು ಆಧ್ಯಾತ್ಮಿಕ ಸಂಸ್ಕಾರ ಬೆಳೆಸಿಕೊಂಡಾಗ ಸಮಗ್ರ ವಿಕಾಸ ಸಾಧ್ಯವಾಗುತ್ತದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಅಖಿಲ ಭಾರತ ವಿದ್ಯಾಭಾರತಿ ಅಧ್ಯಕ್ಷ ಮತ್ತು ದಕ್ಷಿಣ ಮಧ್ಯ ಸಹ ಸಂಘಚಾಲಕ ದೂಸಿ ರಾಮಕೃಷ್ಣರಾವ್ ಹೇಳಿದರು.

ವಿವಿಧ ಗಣ್ಯರು ಭಾಗಿ: ತೆಲಂಗಾಣದ ಹಸಿರು ಕ್ರಾಂತಿ ಪರಿಷತ್ತಿನ ಅಧ್ಯಕ್ಷೆ ಲೀಲಾ ಲಕ್ಷ್ಮಾರೆಡ್ಡಿ, ಜಮ್ಮು -ಕಾಶ್ಮೀರ ಅಧ್ಯಯನ ಕೇಂದ್ರದ ಸದಸ್ಯೆ ಹಾಗೂ ಕಾಶ್ಮೀರ ಫೈಲ್ಸ್ ಚಲನಚಿತ್ರದ ನಟಿ ಭಾಷಾ ಸುಂಬಲಿ ಮಾತನಾಡಿದರು.

ಈ ವೇಳೆ ಜಮ್ಮು ಕಾಶ್ಮೀರ ಅಧ್ಯಯನ ಸಂಸ್ಥೆ ಅಧ್ಯಕ್ಷೆ ಶಕ್ತಿ ಮುನ್ಶಿಜಿ, ಲಾತೂರಿನ ಪರಿಸರ ಸಂಯೋಜನೆ ಮತ್ತು ವ್ಯಕ್ತಿ ವಿಕಾಸ ಕೇಂದ್ರದ ನಿರ್ದೇಶಕ ಮಹಾದೇವ ಗೊಮಾರೆ, ಶಿಕ್ಷಣ ತಜ್ಞ ಡಾ. ಗುರುರಾಜ ಕರಜಗಿ, ಪರಬಣಿಯ ವಸಂತರಾವ ನಾಯಕ್ ಕೃಷಿ ವಿಶ್ವವಿದ್ಯಾಲಯದ ಉಪಕುಲಪತಿ ಇಂದ್ರಮಣಿ, ನವದೆಹಲಿಯ ಸೇವಾ ಇಂಟರ್‌ನ್ಯಾಷನಲ್ ಕಾರ್ಯದರ್ಶಿ ಶ್ಯಾಮ್ ಪರಂಡೇಜಿ, ತೆಲಂಗಾಣದ ರವಿ ಮೇರೆಡ್ಡಿ, ಮುಂಬಯಿನ ಸಮಸ್ತ ಮಹಾಜನ ಟ್ರಸ್ಟ್ ಸದಸ್ಯ ಗಿರಿಶಬಾಯ್ ಶಹಾ, ಧನ್ ಬಹಾದ್ದೂರ ಛತ್ರಿ, ವಿವೇಕ್ ತ್ಯಾಗಿ, ಅರವಿಂದ ತಿವಾರಿ ಮೊದಲಾದವರು ಇದ್ದರು.

ಕೇವಲ 20 ದಿನಗಳಲ್ಲಿ ಕಲಬುರಗಿ ಜಿಲ್ಲೆಯ ಚಿಂಚೋಳಿಯಲ್ಲಿ 17 ಸಾವಿರ ಸಸಿಗಳನ್ನು ನೆಡುವ ಮೂಲಕ ಪ್ರಕೃತಿಗೆ ಪೂರಕವಾದ ಕೆಲಸವನ್ನು ಮಾಡಲಾಗಿದೆ. ಪ್ರಕೃತಿಯಪ್ರಿಯವಾದ ಸಮಾಜದ ನಿರ್ಮಾಣಕ್ಕೆ ನಾವೆಲ್ಲರೂ ಕೈಜೋಡಿಸಬೇಕು. ಪ್ರಕೃತಿ ಮೇಲೆ, ಮಹಿಳೆಯರ ಮೇಲೆ, ಗೋವುಗಳ ಮೇಲೆ ನಡೆಸಲಾಗುತ್ತಿರುವ ಹಲ್ಲೆಗಳು ಖಂಡನೀಯ. ಹೀಗಾಗಿ ಸಮಾಜದಲ್ಲಿ ಬದಲಾವಣೆ ಬಯಸುವ ಮುನ್ನ ನಮ್ಮಲ್ಲಿ ಮೊದಲು ಬದಲಾವಣೆ ತರೋಣ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕರೆ ನೀಡಿದರು.



ರಾಜಕಾರಣಿಗಳು ತಮ್ಮ ಸ್ವಾರ್ಥಕ್ಕೆ ಕಾರ್ಯಕ್ರಮ ನಡೆಸುತ್ತಾರೆ.ಆದರೆ, ಬಸವರಾಜ ಪಾಟೀಲ್ ಸೇಡಮ್ ಅವರು ಭವಿಷ್ಯದ ಮಕ್ಕಳಿಗಾಗಿ,ನಮ್ಮ ಸಂಸ್ಕೃತಿ ಉಳಿವಿಗಾಗಿ ರಾಜಕೀಯವನ್ನೇ ತ್ಯಾಗ ಮಾಡಿ ಇಂತಹ ಉತ್ಸವಗಳನ್ನು ಮಾಡುವ ಮುಖೇನ ನಮಗೆಲ್ಲರಿಗೂ ಪ್ರೇರಣೆಯಾಗಿದ್ದಾರೆ.

– **ಬಸನಗೌಡ ಪಾಟೀಲ್ ಯತ್ನಾಳ್** ಶಾಸಕ

ಕಿವಿ ಚುಚ್ಚಲು ಅನಸ್ತೇಷಿಯಾ: ಮಗು ಸಾವು

ಚಾಮರಾಜನಗರ: ಕಿವಿ ಚುಚ್ಚಲು ಅನಸ್ತೇಷಿಯಾ ನೀಡಿದ ಹಿನ್ನೆಲೆ ಆರು ತಿಂಗಳ ಗಂಡು ಮಗು ಸಾವನ್ನಪ್ಪಿದ ಘಟನೆ ಗುಂಡ್ಲುಪೇಟೆ ತಾಲೂಕಿನ ಬೊಮ್ಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದಿದೆ. ವೈದ್ಯರ ನಿರ್ಲಕ್ಷ್ಯಕ್ಕೆ ಮಗು ಸಾವನ್ನಪ್ಪಿದೆ ಎಂದು ಪೋಷಕರು ಆರೋಪಿಸಿದ್ದಾರೆ. ತಾಲೂಕಿನ ಹಂಗಳ ಗ್ರಾಮ ಆನಂದ್-ಶುಭ ದಂಪತಿಯ ಆರು ವರ್ಷದ ಗುಂಡು ಮಗು ಅಸುನೀಗಿದೆ. ಬಾಣಂತನಕ್ಕೆ ತಾಯಿ ಶುಭ ಸ್ವಗ್ರಾಮ ಶೆಟ್ಟಹಳ್ಳಿಯಲ್ಲಿದ್ದರು. ಕಿವಿ ಚುಚ್ಚಿಸುವ ಸಲುವಾಗಿ ಮಗುವನ್ನು ಬೊಮ್ಮಲಾಪುರ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ವೈದ್ಯ ಡಾ.ನಾಗರಾಜು ಮಗುವಿನ ಎರಡು ಕಿವಿಗಳಿಗೆ ಅನಸ್ತೇಷಿಯಾ ಚುಚ್ಚುಮದ್ದು ನೀಡಿದ್ದಾರೆ. ಈ ವೇಳೆ ಓವರ್ ಡೋಸ್ ಆಗಿದ್ದು, ಮಗುವಿನ ಬಾಯಿಯಲ್ಲಿ ನೊರೆ ಬಂದು ಪ್ರಜ್ಞಾಹೀನ ಸ್ಥಿತಿ ತಲುಪಿದೆ. ನಂತರ ವೈದ್ಯರು ತಾಲೂಕು ಆಸ್ಪತ್ರೆಗೆ ಕರೆದೊಯ್ಯಲು ಸೂಚಿಸಿದರು.ಆದರೆ ಬೊಮ್ಮಲಾಪುರ ಆಸ್ಪತ್ರೆಯಲ್ಲಿಯೇ ಮಗು ಅಸುನೀಗಿದೆ. ಇದಕ್ಕೆ ವೈದ್ಯರ ಎಡವಟ್ಟೇ ಕಾರಣ ಎಂದು ಪೋಷಕರು ದೂರಿದ್ದಾರೆ.

ವೈದ್ಯರ ವಿರುದ್ಧ ಕ್ರಮಕ್ಕೆ ಸಿದ್ಧ: ಈ ಸಂಬಂಧ ಗುಂಡ್ಲುಪೇಟೆ ತಾಲೂಕು ಆರೋಗ್ಯಾಧಿಕಾರಿ ಡಾ.ಅಲೀಂ ಪಾಷಾ ಪ್ರತಿಕ್ರಿಯೆ ನೀಡಿ, ಕಿವಿ ಚುಚ್ಚುವ ವೇಳೆ ನೋವಾಗಬಾರದೆಂದು ವೈದ್ಯರು ಅನಸ್ತೇಷಿಯಾ ಕೊಟ್ಟಿದ್ದಾರೆ. ನಂತರ ಮಗುವಿಗೆ ಫಿಟ್ಸ್ ಕಾಣಿಸಿಕೊಂಡು ಅಸುನೀಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆ ನಂತರ ಸೂಕ್ತ ಕಾರಣ ತಿಳಿಯಲಿದ್ದು, ವೈದ್ಯರ ನಿರ್ಲಕ್ಷ್ಯ ಧೃಢಪಟ್ಟರೆ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಧರ್ಮರಕ್ಷಣೆಗಾಗಿ ಕ್ರಾಂತಿವೀರ ಬ್ರಿಗೇಡ್

← ಮೊದಲಪುಟದಿಂದ

ಕಾಗಿನೆಲೆ ಕನಕಗುರುಪೀಠ ತಿಂಥಿಣಿ ಶಾಖಾಮಠದ ಸಿದ್ದರಾಮಾನಂದಪುರಿ ಸ್ವಾಮೀಜಿ, ಲೋಕಾಪುರದ ಜಗದೀಶ ಆನಂದ ಸ್ವಾಮೀಜಿ, ಮಕನಾಪುರದ ಸೋಮೇಶ್ವರ ಸ್ವಾಮೀಜಿ, ಹುಲಜಂತಿ ಮಾಲಿಂಗರಾಯರು, ಅಮರೇಶ್ವರ ಸ್ವಾಮಿಜಿ, ಸಿದ್ಧಲಿಂಗ ಸ್ವಾಮೀಜಿ, ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ, ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ಸಾವಿರಾರು ಮಠಾಧೀಶರು ಉಪಸ್ಥಿತರಿದ್ದರು. ಸಮಾರಂಭದಲ್ಲಿ 50 ಸಾವಿರಕ್ಕೂ ಅಧಿಕ ಜನಸ್ತೋಮ ಭಾಗಿಯಾಗಿತ್ತು.

ಬೃಹತ್ ಕುಂಭೋತ್ಸವ

ಬ್ರಿಗೇಡ್ ಉದ್ಘಾಟನೆಗೂ ಮುನ್ನ ಬಸವನಬಾಗೇವಾಡಿ ಪಟ್ಟಣದಲ್ಲಿ 1008 ಮಹಿಳೆಯರಿಂದ ಬೃಹತ್ ಕುಂಭೋತ್ಸವ ಜರುಗಿತು. ಕನ್ನೇರಿ ಸ್ವಾಮೀಜಿ ನೇತೃತ್ವದಲ್ಲಿ ಸ್ವಾಮೀಜಿಗಳು ಕುಂಬಳಕಾಯಿ ಒಡೆದು ಬೃಹತ್ ತೆರೆ ಅನಾವರಣಗೊಳಿಸಿ ಲಾಂಛನ ಬಿಡುಗಡೆಗೊಳಿಸಿದರು.ಜತೆಗೆ ಬ್ರಿಗೇಡ್ ಗೀತೆ ಹಾಗೂ ಬ್ರಿಗೇಡ್ ಗೀತೆಯ ಸಿ.ಡಿ. ಅನಾವರಣಗೊಳಿಸಿದರು.

ದಿನದಿಂದ ದಿನಕ್ಕೆ ಹಿಂದೂಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಹಿಂದೂಗಳ ಜನಸಂಖ್ಯೆ ಶೇ.50ಕ್ಕಿಂತಲೂ ಕಡಿಮೆಯಾದಾಗ ಸಂವಿಧಾನ, ಪ್ರಜಾತಂತ್ರ ಉಳಿಯಲ್ಲ. ಬಾಂಗ್ಲಾದೇಶ ಇದಕ್ಕೆ ಸೂಕ್ತ ಉದಾಹರಣೆ. ಕೇರಳದ ಕಲ್ಲಿಕೋಟೆಯಲ್ಲಿ ಕಿಟಕಿ ಬದಲಾಯಿಸಲು ಇಸ್ಲಾಂ ಧರ್ಮ ಸೇರಬೇಕಾಗಿದೆ. ಕಾಸರಗೋಡಿನಲ್ಲಿ ಹಿಂದೂಗಳ ಮನೆಯ ಮುಂದೆಯೇ ಗೋವು ಕಡಿದು ಮಾಂಸ ಹಂಚಿಕೊಳ್ಳುತ್ತಾರೆ.

– **ಕಾಡಸಿದ್ದೇಶ್ವರ ಸ್ವಾಮೀಜಿ** ಕನ್ನೇರಿ ಮಠ

ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ, ಲೋಕೋಪಯೋಗಿ ಇಲಾಖೆ ವಿಭಾಗ, ಬಳ್ಳಾರಿ
Email: ee_pwdbellary@yahoo.com ದೂರವಾಣಿ ಸಂ: 08392 266123

ಸಂ:ಕಾನಿಇ/ಲೋಇ/ಬವಿ/ಟಿ.ಎಸ್-5/2024-25/4932 ದಿನಾಂಕ:03-02-2025

ಅಲ್ಪಾವಧಿ ಟೆಂಡರ್ ಪ್ರಕಟಣೆ

ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತರಾದ ಆಸಕ್ತಿಯುಳ್ಳ ಗುತ್ತಿಗೆದಾರರಿಂದ ಈ ಕೆಳಕಾಣಿಸಿದ ಕಾಮಗಾರಿಗೆ ದ್ವಿ ಲಕೋಟೆ ಪದ್ಧತಿಯಂತೆ ಟೆಂಡರುಗಳನ್ನು ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಆಹ್ವಾನಿಸಲಾಗಿದೆ. ಅರ್ಹ ಗುತ್ತಿಗೆದಾರರು ಪ್ರಕಟಣೆಯಲ್ಲಿನ ಕಾಮಗಾರಿಗಳನ್ನು ಅಂತರ್ಜಾಲದ ಮೂಲಕ ವೆಬ್ ಸೈಟ್ ವಿಳಾಸ **https:kppp.karnataka.gov.in** ವನ್ನು ಸಂದರ್ಶಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದ ಅಧಿಕಾರಿಗಳ ಕಛೇರಿಯಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

ಕ್ರ ಸಂ	ಕಾಮಗಾರಿಗಳ ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)
1)	PWD/2024-25/EL/WORK_INDENT17917	80.00

ಸೂಚನೆ: ಕಾರಣಾಂತರಗಳಿಂದ ಕೆಳಗೆ ತಿಳಿಯಪಡಿಸಿದ ಟೆಂಡರ್ ದಿನಾಂಕಗಳು ಬದಲಾದಲ್ಲಿ, ಮರು ಟೆಂಡರ್ ಆಹ್ವಾನಿಸಿದ್ದಲ್ಲಿ ಹಾಗೂ ಇನ್ನಿತರೆ ಬದಲಾವಣೆಗಳಿದ್ದಲ್ಲಿ ಗುತ್ತಿಗೆದಾರರು ಕೆ.ಪಿ.ಪಿ ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಗಮನಿಸಬಹುದಾಗಿದೆ. ಇದಕ್ಕಾಗಿ ಪ್ರತ್ಯೇಕ ಜಾಹಿರಾತು ಹೊರಡಿಸಲಾಗುವುದಿಲ್ಲ.
ಟೆಂಡರಿಗಾಗಿ ನಿಗದಿಪಡಿಸಿದ ದಿನಾಂಕಗಳು ಕೆಳಗಿನಂತಿವೆ.
ಅ) ಟೆಂಡರ್ ಆಕ್ಷೇಪಣೆಗಳಿಗಾಗಿ ನಿಗದಿಪಡಿಸಲಾದ ದಿನಾಂಕ **07-02-2025 ರಂದು 12.00 ಗಂಟೆಯ ವರೆಗೆ.** ಆ) ಕೆ.ಪಿ.ಪಿ ಪೋರ್ಟ್‌ಲ್ ಮುಖಾಂತರ ಟೆಂಡರುಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ **12-02-2025 ರಂದು 16.00 ಗಂಟೆಯ ವರೆಗೆ.** ಇ) ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ. **13-02-2025 ರಂದು 16.30 ಗಂಟೆಗೆ ಕಾರ್ಯನಿರ್ವಾಹಕ ಇಂಜಿನೀಯರ್, ಲೋಕೋಪಯೋಗಿ ಇಲಾಖೆ ವಿಭಾಗ, ಬಳ್ಳಾರಿ ಇವರ ಕಛೇರಿಯಲ್ಲಿ ತೆರೆಯಲಾಗುವುದು**

ಸಹಿ/-ಕಾರ್ಯನಿರ್ವಾಹಕ ಇಂಜಿನೀಯರ್,
ಲೋಕೋಪಯೋಗಿ ಇಲಾಖಾ ವಿಭಾಗ, ಬಳ್ಳಾರಿ.
ಡಿಐಪಿಆರ್/ಬಳ್ಳಾರಿ/864/ಕೆಎಸ್‌ಎಂಸಿಎ/2024-25

ಸಾರ್ವಜನಿಕ ಗ್ರಂಥಾಲಯ ಇಲಾಖೆ
ಉಪನಿರ್ದೇಶಕರ ಕಛೇರಿ, ನಗರ ಕೇಂದ್ರ ಗ್ರಂಥಾಲಯ, ಉತ್ತರ ವಲಯ, ಮಲ್ಲೇಶ್ವರಂ, ಬೆಂಗಳೂರು-560 003. ದೂರವಾಣಿ: 080-23567065,
E-mail: cclnzlibrary@gmail.com, dd_ccl_nz_bbl@yahoo.co.in

ಸಂ:ನಕೇಗ್ರಂ/ಉವ/ಲೆಪವಿ/34/ದಿಪ&ನಿಕಾಸ/1388/2024-25, ದಿನಾಂಕ : 01-02-2025

ಟೆಂಡರ್ ಪ್ರಕಟಣೆ
(ಕೆಪಿಪಿ ಪೋರ್ಟಲ್ ಮೂಲಕ ಮಾತ್ರ)

